MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 230 | ಶುಕ್ರವಾರ : 27-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 230 | FRIDAY : 27-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಜೆಡಿಎಸ್ ಕಾರ್ಯಕರ್ತರ ಸಭೆ ಹಾಗೂ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ನಿಖಿಲ್ ಕುಮಾರಸ್ವಾಮಿ ಚಾಲನೆ

# ರಾಜ್ಯ ಕಾಂಗ್ರೆಸ್ ಸರ್ಕಾರ ಹಗರಣಗಳಲ್ಲಿ ಮುಳುಗಿದೆ : ನಿಖಿಲ್ ಕುಮಾರಸ್ವಾಮಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.26–**ವಸತಿ ಹಗರಣ, ವಾಲ್ಮೀಕಿ ಹಗರಣ ಸೇರಿದಂತೆ ರಾಜ್ಯ ಸರ್ಕಾರ ಹಗರಣಗಳಲ್ಲಿ ಮುಳುಗಿದ್ದು, ಕಾಂಗ್ರೆಸ್ ಪಕ್ಷದ ಶಾಸಕರೇ ಬಹಿರಂಗವಾಗಿ ಸರ್ಕಾರದ ವಿರುದ್ಧ ಅಸಮಾಧಾನ ಹೊರಹಾಕುತ್ತಿದ್ದಾರೆ. ಸರ್ಕಾರ ಯಾವುದೇ ಕ್ಷಣದಲ್ಲಿ ಬೇಕಾದರೂ ಪತನವಾಗಬಹುದು. ಜೆಡಿಎಸ್ ಕಾರ್ಯಕರ್ತರು ಪಕ್ಷವನ್ನು ಬಲಪಡಿಸಿದರೆ, ನಮ್ಮ ಪಕ್ಷ 48 ಸ್ಥಾನಗಳಿಗಿಂತಲೂ ಹೆಚ್ಚು ಸ್ಥಾನಗಳನ್ನು ಪಡೆದು ಕುಮಾರಣ್ಣ ಮತ್ತೊಮ್ಮೆ ಮುಖ್ಯ ಮಂತ್ರಿಗಳಾಗಲು ಸಾಧ್ಯವಾಗುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದ ಎ.ಪಿ.ಎಂ.ಸಿ. ಆವರಣದಲ್ಲಿ ನಡೆದ ಜೆಡಿಎಸ್ ಕಾರ್ಯಕರ್ತರ ಸಭೆ ಮತ್ತು ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಜೆಡಿಎಸ್ ರಾಜ್ಯ ಯುವ ಘಟಕದ ರಾಜ್ಯಾಧ್ಯಕ್ಷ ಹಾಗೂ ಚಲನಚಿತ್ರ ನಟ ನಿಖಿಲ್ ಕುಮಾರಸ್ವಾಮಿ ಚಾಲನೆ ನೀಡಿ ಮಾತನಾಡಿದ ಅವರು, ಪಕ್ಷದ ಬಲವರ್ಧನೆ ಮತ್ತು ಸಂಘಟನೆಗಾಗಿ ರಾಜ್ಯಾದ್ಯಂತ "ಜನರೊಂದಿಗೆ ಜನತಾದಳ, ಸಶಕ್ತ ಜನತಾದಳ, ಸಮೃದ್ಧ ಕರ್ನಾಟಕ" ಹೆಸರಿನಲ್ಲಿ ಪ್ರವಾಸ ಕೈಗೊಂಡಿರುವುದಾಗಿ ತಿಳಿಸಿದರು.ಜೆಡಿಎಸ್ ಜಾತ್ಯತೀತ ಪಕ್ಷವಾಗಿದ್ದು, ಎಲ್ಲಾ ಜಾತಿ ಸಮುದಾಯದವರಿಗೆ ಸಮಾನ ಅವಕಾಶಗಳನ್ನು ನೀಡಿ ದೇವೇಗೌಡರು ನಾಯಕರನ್ನಾಗಿ ರೂಪಿಸಿದ್ದಾರೆ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು. ಜನರಿಗೆ ಕುಮಾರಸ್ವಾಮಿ ಅವರ ಆಡಳಿತದ ಮೇಲೆ ಭರವಸೆ ಇದ್ದು, ಅವರ ಆಡಳಿತಕ್ಕಾಗಿ ಕಾಯುತ್ತಿದ್ದಾರೆ ಎಂದರು. ಪ್ರಸ್ತುತ ರಾಜ್ಯ ಸರ್ಕಾರ ಭತ್ತ ಮತ್ತು ಜೋಳ ಬೆಳೆದ ರೈತರಿಂದ ಖರೀದಿಸದೆ ಕಣ್ಣೀರು ಹಾಕಿಸುತ್ತಿದೆ. ಆದರೆ ಕೇಂದ್ರ ಸಚಿವರಾಗಿ ಕುಮಾರಸ್ವಾಮಿ ಅವರು ಮಾವು ಬೆಳೆಗಾರರಿಗೆ ಕೇಂದ್ರದಿಂದ ಉತ್ತಮ ಬೆಲೆ ದೊರಕಿಸಲು ನೆರವಾಗುತ್ತಿದ್ದಾರೆ ಎಂದು ತಿಳಿಸಿದರು. ಕಲ್ಯಾಣ ಕರ್ನಾಟಕಕ್ಕೆ 13 ಸಾವಿರ ಕೋಟಿ ನೀಡಿರುವುದಾಗಿ ಮುಖ್ಯಮಂತ್ರಿಗಳು ಸಭೆಯಲ್ಲಿ ಹೇಳುತ್ತಾರೆ. ಆದರೆ, ತಾನು ಈ ಭಾಗದಲ್ಲಿ ಸಂಚಾರ ಮಾಡಿದಾಗ ಎಲ್ಲೂ ಹೊಸ ಆಸ್ಪತ್ರೆಗಳು, ವೈದ್ಯರು ಅಥವಾ ಸರಿಯಾದ ರಸ್ತೆಗಳು ಕಾಣುತ್ತಿಲ್ಲ. ಹಾಗಾದರೆ ಕೆ.ಕೆ.ಆರ್.ಡಿ.ಬಿ.ಗೆ ನೀಡಿದ ಅನುದಾನ ಎಲ್ಲಿಗೆ ಹೋಯಿತು ಎಂಬುದರ ಕುರಿತು ಮುಖ್ಯಮಂತ್ರಿಗಳು ಕೂಡಲೇ ಶ್ವೇತಪತ್ರ ಹೊರಡಿಸಬೇಕು ಎಂದು ನಿಖಿಲ್ ಆಗ್ರಹಿಸಿದರು.







ಕಾಂಗ್ರೆಸ್ ಪಕ್ಷ ರಾಜ್ಯದ ಜನರಿಗೆ 5 ಗ್ಯಾರಂಟಿಗಳನ್ನು ಘೋಷಿಸಿದರೂ, ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪುತ್ತಿಲ್ಲ ಎಂದು ನಿಖಿಲ್ ಕುಮಾರಸ್ವಾಮಿ ಟೀಕಿಸಿದರು. ಕುಮಾರಸ್ವಾಮಿ ಅವರು ಮತ್ತೆ ಅಧಿಕಾರಕ್ಕೆ ಬರಲಿದ್ದಾರೆ 2ನೇ ಪುಟಕ್ಕೆ

### ಸಚಿವ ಬೋಸರಾಜುಗೆ ಟಿಎಂಸಿ ಎಂದರೇನು ಎಂಬುದೇ ಗೊತ್ತಿಲ್ಲ: ರಾಜಾವೆಂಕಟಪ್ಪ ನಾಯಕ

**ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಮಾತನಾಡಿ, ನೀರಾವರಿ ತಜ್ಞರೆಂದು ಕರೆಸಿಕೊಳ್ಳುವ ಸಚಿವ ಬೋಸರಾಜುರವರಿಗೆ ಟಿ.ಎಂ.ಸಿ ಎಂದರೇನೆ ಗೊತ್ತಿಲ್ಲ. ತಾವು ಶಾಸಕರಾಗಿದ್ದಾಗ 5 ವರ್ಷದಲ್ಲಿ 9 ಬೆಳೆಗಳಿಗೆ ಕಾಲುವೆ ನೀರು ನೀಡಿದ್ದೆವು, ಆದರೆ ಇಂದು ನಿಮ್ಮಿಂದ ನೀಡುವುದು ಸಾಧ್ಯವಾಗುತ್ತಿಲ್ಲ. ವಾಲ್ಮೀಕಿ ಸಮುದಾಯದ ಅನುದಾನದ ಹಣವನ್ನು ರಾಯಚೂರು, ಬಳ್ಳಾರಿ, ತೆಲಂಗಾಣ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳ ಗೆಲುವಿಗೆ ಬಳಸಿದ್ದೀರಿ. ನಮ್ಮ ಸಮುದಾಯದ ಮೀಸಲು 15 ಕ್ಷೇತ್ರಗಳಲ್ಲಿ ವಾಲ್ಮೀಕಿ ಸಮುದಾಯದವರು ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಉತ್ತರ ನೀಡೇ ನೀಡುತ್ತಾರೆ. ನೀವು 25 ವರ್ಷಗಳಲ್ಲಿ ಮಾಡದೆ ಇರುವ ಅಭಿವೃದ್ಧಿ 5 ವರ್ಷಗಳಲ್ಲಿ ಮಾಡಿರುವುದಕ್ಕೆ ನೀವು ಮತದಾರರಿಗೆ ಹಣ ನೀಡಿ ನನ್ನನ್ನು ಸೋಲಿಸಿದ್ದೀರಿ. ಸಿರಿವಾರ ತಾಲೂಕಿನ ಅಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡಿದ್ದೇನೆ. ನೂತನ ಬಸ್ ನಿಲ್ದಾಣ ಸೇರಿದಂತೆ ಹಲವು ಯೋಜನೆಗಳನ್ನು ಜಾರಿ ಮಾಡಿದ್ದೇನೆ. ಮಾನ್ವಿ ಕ್ಷೇತ್ರದಲ್ಲಿ ನೂತನ ಮಿನಿ ವಿಧಾನಸೌಧಕ್ಕೆ 10 ಕೋಟಿ ಅನುದಾನ ನೀಡಿ ಟೆಂಡರ್ ಆಗಿರುವ ಕಾಮಗಾರಿಯನ್ನು ಮರು ಟೆಂಡರ್ ಕರೆದಿದ್ದೀರಿ. ಜನರ ಹೃದಯದಲ್ಲಿ ನಿಖಿಲ್ ಕುಮಾರಸ್ವಾಮಿ ಇದ್ದಾರೆ, ಮುಂಬರುವ 2028ರ ಚುನಾವಣೆಯಲ್ಲಿ ನಿಮ್ಮ ದುಡ್ಡಿನ ಆಟ ನಡೆಯುವುದಿಲ್ಲ. ಮಾನ್ವಿಗೆ ರಾಜಣ್ಣ, ರಾಜ್ಯಕ್ಕೆ ಕುಮಾರಣ್ಣ ಎಂದು ಜನರು ನಿರ್ಧರಿಸಿದ್ದಾರೆ ಎಂದು ತಿಳಿಸಿದರು.**

# ಮಾದಕ ವಸ್ತುಗಳ ಬಳಕೆ, ಸಾಗಾಣೆ ತಡೆಗೆ ಸಹಕಾರ ಅಗತ್ಯ



ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.26–**ಸಮಾಜದಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಅಕ್ರಮ ಸಾಗಾಟ ತಡೆಗಟ್ಟುವಲ್ಲಿ ಪ್ರತಿಯೊಬ್ಬರು ಸಹಕಾರ ನೀಡುವ ಮೂಲಕ ಆರೋಗ್ಯಯುತ ಜೀವನ ನಡೆಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ನಾಗಣ್ಣಗೌಡ ಅವರು ಹೇಳಿದರು.

ಗುರುವಾರ ನಗರದ ಇನ್ ಫ್ಯಾಂಟ್ ಶಾಲೆಯಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ–2025ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭವಿಷ್ಯತ್ತಿನ ಉತ್ತಮ ಪ್ರಜೆಗಳಾಗಲು ಹಾಗೂ ಉತ್ತಮ ಸಮಾಜ ನಿರ್ಮಿಸಲು ವಿದ್ಯಾಭ್ಯಾಸದ ಕಡೆಗೆ ಹೆಚ್ಚು ಗಮನ ವಹಿಸಬೇಕು. ಯಾವುದೇ ಕಾರಣಕ್ಕೂ ಮಾದಕ ವಸ್ತುಗಳ ವ್ಯಸನಿಗಳಾಗಬಾರದು. ಕುಟುಂಬದ ಮೇಲೆ ಗಂಭೀರ ಪರಿಣಾಮ ಬೀರುವುದರಿಂದ ಮಾದಕ ವಸ್ತುಗಳಿಂದ ಅತ್ಯಂತ 2ನೇಪುಟಕ್ಕೆ

## ಗ್ರಾಮ ಪಂಚಾಯತಿ ಲೆಕ್ಕಪರಿಶೋಧನಾ ಅಭಿಯಾನ ಪ್ರಾರಂಭ



**ಕಲಬುರಗಿ:ಜೂ.26–**2014–15ನೇ ಸಾಲಿನ ಗ್ರಾಮ ಪಂಚಾಯತಿಗಳ ಲೆಕ್ಕ ಪರಿಶೋಧನಾ ವರದಿಯ ಆಡಿಟ್ ಕಂಡಿಕೆಗಳ ಕುರಿತು ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯು ಅಸಮಾಧಾನ ಹಾಗೂ ಆಕ್ಷೇಪ ವ್ಯಕ್ತಪಡಿಸಿವೆ.

ಈ ಹಿನ್ನೆಲೆಯಲಿ ರಾಜ್ಯದ ಎಲ್ಲ ಗ್ರಾಮ ಪಂಚಾಯತಿಗಳ ಲೆಕ್ಕ ಪರಿಶೋಧನಾ ವರದಿಗಳಲ್ಲಿನ ಆಕ್ಷೇಪಣೆ ಮತ್ತು ವಸೂಲಾತಿ ಕಂಡಿಕೆಗಳ ತೀರುವಳಿಗೆ ನಿಯಮಾನುಸಾರ ಕ್ರಮ ಜರುಗಿಸಲು ಗ್ರಾಮ ಪಂಚಾಯಿತಿಗಳ ಲೆಕ್ಕ ಪರಿಶೋಧನಾ ಅಭಿಯಾನವನ್ನು ಜೂನ್ 10ರಿಂದ 100 ದಿನಗಳ ಕಾಲ ಎಲ್ಲ ಜಿಲ್ಲೆಗಳಲ್ಲಿ ನಡೆಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಬಗ್ಗೆ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ವಿಧಾನ ಸಭೆ 2ನೇ ಪುಟಕ್ಕೆ

## ರಕ್ಷಣಾ ಸ್ವಾವಲಂಬನೆಗೆ ಒತ್ತು : ಪ್ರಧಾನಿ ಮೋದಿ



**ನವದೆಹಲಿ, ಜೂ. 26–** ಪ್ರಧಾನಿ ನರೇಂದ್ರ ಮೋದಿ ಅವರು ಸೌತ್ ಬ್ಲಾಕ್‌ನಲ್ಲಿ ನಡೆದ ಪ್ರಗತಿ ಸಭೆಯಲ್ಲಿ, ಗಣಿ, ರೈಲ್ವೆ ಮತ್ತು ಜಲಸಂಪನೂಲ ವಲಯಗಳಲ್ಲಿನ ಪ್ರಮುಖ ಯೋಜನೆಗಳನ್ನು ಪರಿಶೀಲಿಸಿದರು.

ಆರೋಗ್ಯ ಸಮಾನತೆಯ ಮೇಲೆ ಕೇಂದ್ರಿಕರಿಸುವ ಬಗ್ಗೆ ಹಾಗೂ ರಕ್ಷಣಾ ಸ್ವಾವಲಂಬನೆಯ ಕಾರ್ಯತಂತ್ರದ ಪಾತ್ರದ ಬಗ್ಗೆ ಅವರು ಇದೇ ಸಂದರ್ಭದಲ್ಲಿ ಮಾತನಾಡಿದರು. ವಾಸ್ತವವಾಗಿ, ಪ್ರಗತಿ ಬಹು–ಮಾದರಿ ವೇದಿಕೆಯಾಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರಯತ್ನಗಳನ್ನು ಸಂಯೋಜಿಸುವ ಮೂಲಕ ಪೂರ್ವಭಾವಿ ಆಡಳಿತ ಮತ್ತು ಸಕಾಲಿಕ ಅನುಷ್ಠಾನವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ, ಗಣಿಗಾರಿಕೆ, ರೈಲ್ವೆ ಮತ್ತು ಜಲ ಸಂಪನ್ಮೂಲ ವಲಯಗಳಲ್ಲಿನ ಹಲವಾರು ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಪ್ರಧಾನಿ ಪರಿಶೀಲಿಸಿದರು.

# ಕಾಲುವೆ ದುರಸ್ತಿ ಕೈಬಿಡಲು ರೈತ ಸಂಘ ಒತ್ತಾಯ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.26–** ಬಿತ್ತನೆ ಸಮಯದಲ್ಲಿ ಅಧಿಕಾರಿಗಳು ಕಾಲುವೆಗಳ ದುರಸ್ತಿಗೆ ಮುಂದಾಗಿರುವುದು ಅವೈಜ್ಞಾನಿಕವಾಗಿದ್ದು, ಕೂಡಲೇ ದುರಸ್ತಿ ಕಾಮಗಾರಿ ಕೈಬಿಟ್ಟು ವಾರದೊಳಗೆ ವಾರಬಂದಿ ಮಾಡದೇ ನಿರಂತರವಾಗಿ ಕಾಲುವೆಗಳಿಗೆ ನೀರು ಹರಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಸಹಾಯಕ ಆಯುಕ್ತರ ಕಚೇರಿ ಅಧಿಕಾರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಮುಂಗಾರು ಹಂಗಾಮಿನ ನಾಟಿ ಸಮಯ ಸಮೀಪಿಸಿದ ಪರಿಣಾಮ ಪ್ರಸಕ್ತ ಸಾಲಿನ ನಾರಾಯಣಪುರ ಹಾಗೂ ರಾಂಪುರ ಏತ ನೀರಾವರಿ ಯೋಜನೆ ಕಾಲುವೆಗಳ ದುರಸ್ತಿ ಕಾಮಗಾರಿ ತಡೆಹಿಡಿಯಬೇಕು. ಅಧಿಕಾರಿಗಳ ನಿರ್ಲಕ್ಷ್ಯದಿಂದ ಜಂಗಲ್ ಕಟಿಂಗ್ ಇಲ್ಲದೇ , ಶಿಲ್ಟ್ ತೆಗೆಯದೇ ಹಾಗೆಯೇ ಉಳಿದಿರುವುದು ದುರಂತ. ನಾಟಿ ಮಾಡುವ ಸಮಯ ಬಂದಾಗ ಕಾಲುವೆಗಳ ದುರಸ್ತಿಗೆ ಟೆಂಡರ್ ಕರೆದಿರುವುದು ಎಷ್ಟು ಸರಿ. ಕೂಡಲೇ ಇದನ್ನು ರದ್ದು ಪಡಿಸಿ ರೈತರಿಗೆ ನೆರವಾಗುವ ಕೆಲಸ ಮಾಡುವಂತೆ ಒತ್ತಾಯಿಸಿದರು.



ಈ ಸಂದರ್ಭದಲ್ಲಿ ಸಂಘದ ಜಿಲ್ಲಾಧ್ಯಕ್ಷ ಶಿವಪುತ್ರಗೌಡ ನಂದಿಹಾಳ, ಹನುಮನಗೌಡ ಇದ್ದರು.

# ಸಂಸತ್‌ಗಿಂತ ಸಂವಿಧಾನವೇ ಸರ್ವೋಚ್ಚ ಸಿಜೆಐ ಬಿ.ಆರ್. ಗವಾಯಿ

**ಅಮರಾವತಿ,ಜೂ.26–** ಭಾರತದ ಸಂವಿಧಾನವು ಸರ್ವೋಚ್ಚವಾಗಿದ್ದು, ಪ್ರಜಾಪ್ರಭುತ್ವದ 3 ಅಂಗಗಳು ಅದರ ಅಡಿಯಲ್ಲಿ ಕಾರ್ಯನಿರ್ವಹಿ ಸುತ್ತವೆ ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಹೇಳಿದ್ದಾರೆ.ಮೂಲ ರಚನೆ ಸಿದ್ಧಾಂತದ ಅಡಿಪಾಯದ ಕುರಿತು ಸುಪ್ರಿಂ ಕೋರ್ಟ್ ನೀಡಿದ ತೀರ್ಪನ್ನು ಉಲ್ಲೇಖಿಸಿ, ಸಂಸತ್ತಿಗೆ ತಿದ್ದುಪಡಿ ಮಾಡುವ ಅಧಿಕಾರವಿದೆ, ಆದರೆ ಅದು ಸಂವಿಧಾನದ ಮೂಲ ರಚನೆಯನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದು ಅವರು ಹೇಳಿದರು.

ಕಳೆದ ತಿಂಗಳು 52 ನೇ ಸಿಜೆಐ ಆಗಿ ಪ್ರಮಾಣ ವಚನ ಸ್ವಿಕರಿಸಿದ ನ್ಯಾಯಮೂರ್ತಿ ಗವಾಯಿ ಅವರು ತಮ್ಮ ತವರು ಮಹಾರಾಷ್ಟ್ರದ ಪೂರ್ವದ ಅಮರಾವತಿ ನಗರದಲ್ಲಿ ನಡೆದ ಸನ್ಮಾನ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಕೆಲವರು ಸಂಸತ್ತು ಸರ್ವೋಚ್ಚ ಎಂದು ಹೇಳಿದರೆ, ಅವರ ಅಭಿಪ್ರಾಯದಲ್ಲಿ ಸಂವಿಧಾನವು ಸರ್ವೋಚ್ಚವಾಗಿದೆ.ಪ್ರಜಾಪ್ರಭುತ್ವದ ಯಾವ ಅಂಗ ಕಾರ್ಯಾಂಗ, ಶಾಸಕಾಂಗ ಅಥವಾ ನ್ಯಾಯಾಂಗ ಸರ್ವೋಚ್ಚ ಎಂಬ ಬಗ್ಗೆ ಯಾವಾಗಲೂ ಚರ್ಚೆ ನಡೆಯುತ್ತದೆ ಎಂದು ಅವರು ಹೇಳಿದರು.

ಸಂಸತ್ತು ಸರ್ವೋಚ್ಚ ಎಂದು ಹಲವರು ಹೇಳುತ್ತಾರೆ ಮತ್ತು ನಂಬುತ್ತಾರೆ, ಆದರೆ ನನ್ನ ಪ್ರಕಾರ, ಭಾರತದ ಸಂವಿಧಾನವೇ ಸರ್ವೋಚ್ಚ. ಪ್ರಜಾಪ್ರಭುತ್ವದ ಮೂರು ಅಂಗಗಳು ಸಂವಿಧಾನದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತವೆ ಎಂದು ಅವರು ಹೇಳಿದರು.



ಸರ್ಕಾರದ ವಿರುದ್ಧ ಆದೇಶಗಳನ್ನು ಹೊರಡಿಸುವುದರಿಂದ ನ್ಯಾಯಾಧೀಶರು ಸ್ವತಂತ್ರರಾಗುವುದಿಲ್ಲ ಎಂದು ಅವರು ಹೇಳಿದರು.ನಮಗೆ ಒಂದು ಕರ್ತವ್ಯವಿದೆ ಮತ್ತು ನಾವು ನಾಗರಿಕರ ಹಕ್ಕುಗಳು ಮತ್ತು ಸಾಂವಿಧಾನಿಕ ಮೌಲ್ಯಗಳು ಮತ್ತು ತತ್ವಗಳ ರಕ್ಷಕರು ಎಂಬುದನ್ನು ನ್ಯಾಯಾಧೀಶರು ಯಾವಾಗಲೂ ನೆನಪಿನಲ್ಲಿಟ್ಟುಕೊಳ್ಳಬೇಕು. ನಮಗೆ ಕೇವಲ ಅಧಿಕಾರವಿಲ್ಲ, ಬದಲಾಗಿ ನಮ್ಮ ಮೇಲೆ ಕರ್ತವ್ಯವನ್ನು ಹೊರಿಸಲಾಗಿದೆ ಎಂದು ಅವರು ಹೇಳಿದರು. ಜನರು ತಮ್ಮ ತೀರ್ಪಿನ ಬಗ್ಗೆ ಏನು ಹೇಳುತ್ತಾರೆ ಅಥವಾ ಭಾವಿಸುತ್ತಾರೆ ಎಂಬುದರ ಮೇಲೆ ನ್ಯಾಯಾಧೀಶರು ಮಾರ್ಗದರ್ಶನ ಪಡೆಯಬಾರದು ಎಂದು ಸಿಜೆಐ ಹೇಳಿದರು.

## ಮೊದಲನೇಯ ಪುಟದಿಂದ

# ರಾಜ್ಯ ಕಾಂಗ್ರೆಸ್ ಸರ್ಕಾರ ಹಗರಣಗಳಲ್ಲಿ ಮುಳುಗಿದೆ : ನಿಖಿಲ್ ಕುಮಾರಸ್ವಾಮಿ

ಮತ್ತು ಉತ್ತಮ ಆಡಳಿತದೊಂದಿಗೆ ಪ್ರತಿ ತಾಯಂದಿರಿಗೆ ಮಾಸಿಕ 5 ಸಾವಿರ ನೀಡಲಿದ್ದಾರೆ ಎಂದು ಭರವಸೆ ನೀಡಿದರು. ರಾಜ್ಯದಲ್ಲಿ ಪ್ರವಾಸ ಮಾಡುತ್ತಿರುವುದು ರಾಜ್ಯಾಧ್ಯಕ್ಷರಾಗುವುದಕ್ಕಲ್ಲ, ಬದಲಾಗಿ ಪಕ್ಷವನ್ನು ಸದೃಢಗೊಳಿಸುವುದಕ್ಕಾಗಿ. ತಾನು ಮೂರು ಬಾರಿ ಸೋತಿರಬಹುದು, ಆದರೆ ಇಲ್ಲಿ ಸೋಲು ಗೆಲುವು ಮುಖ್ಯವಲ್ಲ, ಜನರ ಹೃದಯದಲ್ಲಿ ಸ್ಥಾನ ಗಳಿಸುವುದಕ್ಕಾಗಿ ನಿರಂತರವಾಗಿ ಹೋರಾಟ ಮಾಡುತ್ತೇನೆ ಎಂದರು.

ದೇವೇಗೌಡರ ಗರಡಿಯಲ್ಲಿ ಬೆಳೆದ ಅನೇಕ ನಾಯಕರು ಇಂದು ಪಕ್ಷವನ್ನು ಬಿಟ್ಟು ಅಧಿಕಾರ ಪಡೆದಿರಬಹುದು, ಆದರೆ ಜೆಡಿಎಸ್ ಪಕ್ಷ ಕಾರ್ಯಕರ್ತರ ಪಕ್ಷವಾಗಿದ್ದು, ಪಕ್ಷವನ್ನು ಮುಗಿಸಲು ಸಾಧ್ಯವಿಲ್ಲ. ದೇವದುರ್ಗದಲ್ಲಿ ಬಲಾಢ್ಯ ಅಭ್ಯರ್ಥಿಯ ವಿರುದ್ಧ ಇಂದು ಸಾಮಾನ್ಯ ಮಹಿಳೆ ಕರೆಮ್ಮ ಗೆಲುವು ಸಾಧಿಸಲು ಕ್ಷೇತ್ರದಲ್ಲಿ ದೇವೇಗೌಡರು ತಮ್ಮ ಅವಧಿಯಲ್ಲಿ ಕೈಗೊಂಡ ನೀರಾವರಿ ಯೋಜನೆಗಳೇ ಕಾರಣವಾಗಿವೆ. ಜೂನ್ 27ರಂದು ದೇವೇಗೌಡರು ದೇವದುರ್ಗ ತಾಲೂಕಿಗೆ ನೀಡಿದ ನೀರಾವರಿ ಯೋಜನೆಗಳಿಗಾಗಿ ಅಲ್ಲಿನ ಜನರು ದೇವೇಗೌಡರ ಮೂರ್ತಿ ಸ್ಥಾಪನೆಯನ್ನು ಸ್ವತಃ ಅವರಿಂದಲೇ ಮಾಡಿಸುತ್ತಿದ್ದಾರೆ, ಅದರಲ್ಲಿ ತಾನು ಭಾಗವಹಿಸಬೇಕಾಗಿದೆ. ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕದಲ್ಲಿಯೂ ಜೆ.ಡಿ.ಎಸ್. ಪಕ್ಷಕ್ಕೆ ಪ್ರಾಮಾಣಿಕ ಕಾರ್ಯಕರ್ತರಿದ್ದಾರೆ. ಅವರನ್ನು ಮುಂಬರುವ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿಗಳಿಗೆ ಪಕ್ಷದಿಂದ ನಿಲ್ಲಿಸಿ ಗೆಲ್ಲಿಸಿಕೊಂಡು ಬರುವುದು ತನ್ನ ಹೋರಾಟವಾಗಿದೆ ಎಂದು ನಿಖಿಲ್ ತಿಳಿಸಿದರು.

ಮಾಜಿ ಸಚಿವ ವೆಂಕಟರಾವ್ ನಾಡಗೌಡ: ಜಿಲ್ಲೆಯಲ್ಲಿ ಜೋಳ ಬೆಳೆದ ರೈತರ ಸಂಕಷ್ಟಕ್ಕೆ ರಾಜ್ಯ ಸರ್ಕಾರ ಸ್ಪಂದಿಸುತ್ತಿಲ್ಲ. ರೈತರ ಜೀವದ ಜೊತೆ ಸರ್ಕಾರ ಚೆಲ್ಲಾಟವಾಡುತ್ತಿದೆ. 10 ಸಾವಿರ ಕ್ವಿಂಟಾಲ್ ಜೋಳ ಖರೀದಿ ಬಾಕಿ ಇದೆ. ತುಂಗಭದ್ರಾ ಜಲಾಶಯದಲ್ಲಿ 45 ಟಿ.ಎಂ.ಸಿ ನೀರು ಸಂಗ್ರಹವಾಗಿದ್ದು, ನಿತ್ಯ ನೀರು ಹರಿದುಬರುತ್ತಿದೆ. ಆದರೆ, ನೀರಾವರಿ ತಜ್ಞ ಕನ್ನಯ್ಯನಾಯ್ಡು ನೀಡಿದ ಸೂಚನೆಯಂತೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದಂತೆ ಜಲಾಶಯಕ್ಕೆ ಗೇಟ್‌ಗಳನ್ನು ಅಳವಡಿಸದೆ ಇರುವುದರಿಂದ ನೀರು ಸಂಗ್ರಹಣೆಗೆ ತೊಂದರೆಯಾಗುತ್ತಿದೆ. ರೈತರಿಗೆ ಹೆದರಿ ಬೆಂಗಳೂರಿನಲ್ಲಿ ಐ.ಸಿ.ಸಿ. ಸಭೆ ನಡೆಸಲಾಗುತ್ತಿದೆ. ಸಿದ್ದರಾಮಯ್ಯನವರೇ ಹಣಕಾಸಿನ ಮಂತ್ರಿಯಾಗಿದ್ದರೂ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಅನುದಾನ ದುರುಪಯೋಗವಾಗುತ್ತಿರುವುದನ್ನು ಪತ್ತೆ ಮಾಡಲು ಸಾಧ್ಯವಾಗಿಲ್ಲ ಎಂದರೆ ಹೇಗೆ? ಮುಂದಿನ ಚುನಾವಣೆಯಲ್ಲಿ ರಾಜಾ ವೆಂಕಟಪ್ಪ ನಾಯಕರೇ ಜೆಡಿಎಸ್ ಪಕ್ಷದ ಅಭ್ಯರ್ಥಿಯಾಗಲಿದ್ದಾರೆ, ಅವರನ್ನು ಗೆಲ್ಲಿಸುವ ಜವಾಬ್ದಾರಿ ಮಾತ್ರ ಪಕ್ಷದ ಕಾರ್ಯಕರ್ತರದ್ದು ಎಂದು ತಿಳಿಸಿದರು.

ಹಗರಿಬೊಮ್ಮನಹಳ್ಳಿ ಶಾಸಕ ನೇಮಿರಾಜ ನಾಯಕ್, ಮಾಜಿ ಸಚಿವ ಹನುಮಂತಪ್ಪ ಅಲ್ಕೋಡ್ ಕೂಡ ಮಾತನಾಡಿದರು. ಮಾನ್ವಿ ಪಟ್ಟಣಕ್ಕೆ ಆಗಮಿಸಿದ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರನ್ನು ಸಿಂಧನೂರು ರಸ್ತೆಯಲ್ಲಿರುವ ಕರಡಿಗುಡ್ಡ ವೃತ್ತದಲ್ಲಿ ತಾಲ್ಲೂಕು ಜೆಡಿಎಸ್ ಪಕ್ಷದಿಂದ ಪಟ್ಟಣದ ಪ್ರಮುಖ ರಸ್ತೆಗಳ ಮೂಲಕ ವೇದಿಕೆಯವರೆಗೂ ನೂರಾರು ಜೆಡಿಎಸ್ ಕಾರ್ಯಕರ್ತರು ಬೈಕ್ ರ್ಯಾಲಿ ಮೂಲಕ ಅದ್ದೂರಿಯಾಗಿ ಬರಮಾಡಿಕೊಂಡರು. ವೇದಿಕೆಯಲ್ಲಿ ಜೆಡಿಎಸ್ ತಾಲ್ಲೂಕು ಘಟಕದಿಂದ ನಿಖಿಲ್ ಕುಮಾರಸ್ವಾಮಿಯವರಿಗೆ ಬೃಹತ್ ಹೂವಿನ ಹಾರ ಹಾಕಿ ಸನ್ಮಾನಿಸಿ ಗೌರವಿಸಲಾಯಿತು.

ರಾಜ್ಯ ಜೆ.ಡಿ.ಎಸ್. ಯುವ ಘಟಕದ ರಾಜ್ಯ ಉಪಾಧ್ಯಕ್ಷರಾದ ರಾಜಾ ರಾಮಚಂದ್ರ ನಾಯಕ, ರಾಜಾ ಮಹೇಂದ್ರ ನಾಯಕ, ರಾಜಾ ಆದರ್ಶನಾಯಕ, ರಾಜ್ಯ ಜೆಡಿಎಸ್ ಮಹಿಳಾ ಘಟಕದ ಅಧ್ಯಕ್ಷೆ ರಶ್ಮಿ ರಾಮೇಗೌಡ, ಮಹಾಂತೇಶ್ ಪಾಟೀಲ್ ಅತ್ತನೂರು, ಸಿದ್ದು ಬಂಡಿ, ನರಸಿಂಹನಾಯಕ, ಬಳ್ಳಾರಿ ಜೆಡಿಎಸ್ ಅಧ್ಯಕ್ಷರಾದ ಮಿನ್ನಾಳ್ಳಿ ತಾಯಣ್ಣ, ಜನತಾದಳ ಜಾತ್ಯತೀತ ಪಕ್ಷದ ಮಾನ್ವಿ ತಾ. ಅಧ್ಯಕ್ಷರಾದ ಡಾ. ಈರಣ್ಣ ಮರ್ಲಟ್ಟಿ, ಸಿರಿವಾರ ತಾಲೂಕ ಜೆ.ಡಿ.ಎಸ್ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಬಲ್ಲಟಗಿ, ತಾ. ಜೆಡಿಎಸ್ ಯುವ ಘಟಕದ ಅಧ್ಯಕ್ಷ ಪಿ.ರವಿಕುಮಾರ ವಕೀಲರು, ತಾ. ಜೆಡಿಎಸ್ ಪಕ್ಷದ ಮುಖಂಡರಾದ ಖಲೀಲ್ ಖುರೇಶಿ, ಎಚ್. ಮೌನೇಶ, ಬಸನಗೌಡ ಬೆಟ್ಟದೂರು, ವಿಜಯ ಕುಮಾರ, ಸುಭಾನ್ ಬೇಗ್, ಶೌಕತ್ ಅಲಿ, ನಾರಾಯಣರಾವ್, ಶಿವರಾಮರೆಡ್ಡಿ, ದೇವರಾಜನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಾದಕ ವಸ್ತುಗಳ ಬಳಕೆ, ಸಾಗಾಣೆ ತಡೆಗೆ ಸಹಕಾರ ಅಗತ್ಯ

ಜಾಗೃತರಾಗಿರ ಬೇಕು. ಮಕ್ಕಳೇ ಈ ದೇಶದ ಆಸ್ತಿಯಾಗಿದ್ದು, ಇಂದು ಮಕ್ಕಳು ಹಾದಿ ತಪ್ಪುತ್ತಿರುವುದು ಕಳವಳಕಾರಿಯಾಗಿದೆ. ಪೋಷಕರು ಮಕ್ಕಳ ಮುಂದೆ ಮಾದಕ ವಸ್ತುಗಳ ಸೇವನೆ, ಮದ್ಯಪಾನ ಮಾಡಬಾರದು.ಈ ವ್ಯಸನವವು ಆರೋಗ್ಯ, ಕುಟುಂಬದ ನೆಮ್ಮದಿ ಹಾಗೂ ಸಮಾಜದ ಸ್ವಾಸ್ಥ್ಯವನ್ನೇ ಹಾಳು ಮಾಡುತ್ತದೆ. ಈ ದಿನದ ಪ್ರಮುಖ ಉದ್ದೇಶ ಜನರನ್ನು ಮಾದಕ ವಸ್ತುಗಳಿಂದ ದೂರವಿಡುವುದು ಮತ್ತು ಮಾದಕ ವಸ್ತು ಕಳ್ಳಸಾಗಣೆ ತಡೆಯುವುದು. ಈ ಕ್ರಮವು ಮಕ್ಕಳು ಮತ್ತು ಯುವ ಜನರ ಭವಿಷ್ಯವನ್ನು ಉಜ್ವಲವಾಗಿಸುಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ಮಾತನಾಡಿ, ಮಾದಕ ವಸ್ತುಗಳ ಸಾಗಣೆ ತಡೆಗೆ ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಅಬಕಾರಿ ಇಲಾಖೆಗಳು ನಿರಂತರ ಕ್ರಮ ವಹಿಸುತ್ತಿವೆ. ಪೋಷಕರು ತಮ್ಮ ಮಕ್ಕಳ ಮೇಲೆ ನಿಗಾ ವಹಿಸಿದಲ್ಲಿ ಮಕ್ಕಳು ದಾರಿ ತಪ್ಪುವುದಿಲ್ಲ ಎಂದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ಅವರು ಮಾತನಾಡಿ, ರಾಯಚೂರ ಜಿಲ್ಲೆಯಲ್ಲಿ ಮಾದಕ ವಸ್ತುಗಳ ಬಳಕೆಯ ಜಾಲ ಬೇಧಿಸಿ, ಮಾದಕ ವಸ್ತುಗಳ ಬಳಕೆಯ ನಿಯಂತ್ರಣಕ್ಕೆ ಕಠಿಣ ಕ್ರಮ ವಹಿಸಲಾಗುವುದು ಎಂದರು. ಈ ಬಗ್ಗೆ ಪ್ರಕರಣ ದಾಖಲಿಸಿ ಆರೋಪಿಗಳನ್ನು ಬಂಧಿಸಲಾಗಿದೆ. ಪ್ರತಿದಿನ ಈ ಬಗ್ಗೆ ನಿರಂತರವಾಗಿ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದರು.

ಪ್ರತಿಜ್ಞಾವಿಧಿ ಬೋಧನೆ: ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಅಂತರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ, ಮಾದಕ ದ್ರವ್ಯ ವ್ಯಸನ ಮುಕ್ತ ರಾಷ್ಟ್ರ ನಿರ್ಮಾಣ ಮಾಡಲು ನಾವು ಗಾಂಜಾ, ಅಫೀಮುದಂತಹ ಮಾದಕ ದ್ರವ್ಯಗಳನ್ನು ಸೇವಿಸುವುದಿಲ್ಲ. ಇತರರು ಸೇವಿಸದಂತೆ ಶ್ರಮಿಸುತ್ತೇವೆ ಎಂಬ ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷರಾದ ಪವನ ಕುಮಾರ್, ಅಬಕಾರಿ ಉಪ ಆಯುಕ್ತರಾದ ಸಿ.ಕೆ.ಮಹೇಶ, ಡಿವೈಎಸ್‌ಪಿ ಶಾಂತವೀರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ನವೀನ ಕುಮಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅಮರೇಶ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ಮನೋವೈದ್ಯ ಡಾ.ಮನೋಹರ್ ವೈ.ಪತ್ತಾರ್, ಸೈಕಾಲಾಜಿಸ್ಟ್ ಡಾ.ಮಹೇಶ್ ಕುಮಾರ್, ಇನ್‌ಫೆಂಟ್ ಶಾಲೆಯ ಫಾದರ್ ಸ್ಯಾಮ್ಯುಯೆನ್ಸ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಹಿರಿಯ ಪ್ರಾಚಾರ್ಯ ಕುಂಟೇಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ವಿವಿಧ ವಸತಿ ನಿಯಗಳ ನಿಲಯಪಾಲಕರು ಇದ್ದರು.

# ಗ್ರಾಮ ಪಂಚಾಯತಿ ಲೆಕ್ಕಪರಿಶೋಧನಾ ಅಭಿಯಾನ ಪ್ರಾರಂಭ

ಹಾಗೂ ಪರಿಷತ್‌ಗೆ ಸಂಬಂಧಿಸಿದ ಸಭೆಗಳಲ್ಲಿ ಗ್ರಾಮ ಪಂಚಾಯತಿಗಳಲ್ಲಿ ಬಾಕಿ ಇರುವ ಲೆಕ್ಕ ಪರಿಶೋಧನೆ ಕಂಡಿಕೆಗಳು ತೀರುವಳಿಯಾಗದಿರುವ ಬಗ್ಗೆ ಚರ್ಚೆಯಾಗುತ್ತಲೇ ಇರುತ್ತದೆ.

ಉಲ್ಲೇಖಿತ ರಾಜ್ಯ ಲೆಕ್ಕಪತ್ರ ಹಾಗೂ ಲೆಕ್ಕ ಪರಿಶೋಧನೆ ಇಲಾಖೆಯ ಲೆಕ್ಕ ಪರಿಶೋಧನಾ ವರದಿಯಲ್ಲಿ, ರಾಜ್ಯದ ಎಲ್ಲ ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದಂತೆ ಆರ್ಥಿಕ ವರ್ಷ 2022–23 ರ ಅಂತ್ಯಕ್ಕೆ 1505.86 ಕೋಟಿ ಮೊತ್ತದ 56,551 ಕಂಡಿಕೆಗಳು ತೀರುವಳಿಯಾಗಬೇಕಿರುವ ಕಾರಣದಿಂದಾಗಿ ಈ ಅಭಿಯಾನವನ್ನು ನಡೆಸಲಾಗುತ್ತಿದೆ ಎಂದು ಸಚಿವರು ಹೇಳಿದ್ದಾರೆ.

ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈ ಅಭಿಯಾನದಡಿ ಎಲ್ಲ ಜಿಲ್ಲೆಗಳ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ ಆರ್ಥಿಕ ವರ್ಷ 2023–24ರ ಅಂತ್ಯದವರೆಗೆ ಬಾಕಿ ಇರುವ ಲೆಕ್ಕ ಪರಿಶೋಧನಾ ಕಂಡಿಕೆಗಳನ್ನು ನಿಯಮಾನುಸಾರ ಇತ್ಯರ್ಥಗೊಳಿಸಲು, ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಡ್ ಹಾಕ್ ಸಮಿತಿಯ ಸಭೆಗಳನ್ನು ತಿಂಗಳಿಗೆ ಕನಿಷ್ಠ ಎರಡು ಬಾರಿ ಹಾಗೂ ಅವಶ್ಯಕತೆ ಇದ್ದಲ್ಲಿ ವಾರಕ್ಕೊಮ್ಮೆ ನಡೆಸಲು ಸಲಹೆ ನೀಡಲಾಗಿದೆ. ಸಭೆಗಳಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು ಕಂಡಿಕೆವಾರು ವಿಷಯಗಳನ್ನು ತೆಗೆದುಕೊಂಡು ನಿಯಮಾನುಸಾರ ಇತ್ಯರ್ಥಗೊಳಿಸಬೇಕು. ಗ್ರಾಮ ಪಂಚಾಯತಿಗಳು ಸಮರ್ಪಕ ಉತ್ತರವನ್ನು ದಾಖಲಾತಿಗಳೊಂದಿಗೆ ಸಲ್ಲಿಸದೆ ಇದ್ದಲ್ಲಿ ವಸೂಲಾತಿಗೆ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದೆ.

# ರೈಲು ನಿಲ್ದಾಣದ ಬಳಿಯಲ್ಲಿ 3 ತಿಂಗಳಿನ ಮಗುವಿನ ಮೃತದೇಹ ಪತ್ತೆ

ಯುವ ಮಾರ್ಗ ಸುದ್ದಿ



**ರಾಯಚೂರು,ಜೂ.26–**ರಾಯಚೂರು ರೈಲ್ವೇ ನಿಲ್ದಾಣದ ವೇದಿಕೆ ಸಂಖ್ಯೆ: 01 ರಲ್ಲಿ ಕೃಷ್ಣಾ ಎಂಡ್ ಕಂಪೌಂಡ್ ಪಕ್ಕದಲ್ಲಿ 03 ತಿಂಗಳ ವಯೋಮಾನದ ಅಪರಿಚಿತ ಗಂಡು ಮಗುವಿನ ಮೃತದೇಹವನ್ನು ಯಾರೊ ದುಷ್ಕರ್ಮಿಗಳು ಒಂದು ಕಪ್ಪು ಬಣ್ಣದ ಬ್ಯಾಗನಲ್ಲಿ ಮೃತಪಟ್ಟ ಸ್ಥಿತಿಯಲ್ಲಿ ಬಿಸಾಕಿ ಹೋಗಿದ್ದು, ಈ ಕುರಿತು ಸಿಆರ್ ನಂಬರ್: 19/2025 ಯು/ಎಸ್ 94 ಬಿಎನ್‌ಎಸ್ ರೀತ್ಯಾ ಪ್ರಕರಣ ದಾಖಲಿಸಿ ವಾರಸುದಾರರು ಪತ್ತೆಗೆ ಕೋರಲಾಗಿದೆ.

ಮೃತದೇಹ ದೊರೆತ ಘಟನಾ ಸ್ಥಳಗಳಲ್ಲಿ ಮೃತನ ವಾರಸುದಾರರು ಯಾರು ಪತ್ತೆಯಾಗಿ ರುವುದಿಲ್ಲ. ಆದ್ದರಿಂದ ಮೃತ ಮಗುವಿನ ವಾರುಸುದಾರ ಪತ್ತೆ ಹಾಗೂ ಪಿ. ಎಂ.ಇ. ಸಲುವಾಗಿ ಮೃತದೇಹಗಳನ್ನು ರಾಯಚೂ ರಿನ ರಿಮ್ಸ್ ಆಸ್ಪತ್ರೆಯ ಶೀತಲ ಶವಗಾರದಲ್ಲಿಟ್ಟಿರುತ್ತದೆ.

ಚಹರೆ ಪಟ್ಟಿ: ಅಪರಿಚಿತ ಗಂಡು ಮಗುವಿನ ವಯಸ್ಸು ಸುಮಾರು 03 ತಿಂಗಳು, ಎತ್ತರ ಸುಮಾರು 18 ಇಂಚು, ಸಾದಾ ಕಪ್ಪು ಮೈ ಬಣ್ಣ, ತಲೆಯಲ್ಲಿ 01 ಇಂಚು ಕಪ್ಪು ಕೂದಲು, ಮಂಡ ಮೂಗು, ಕಣ್ಣುಗಳು ಮುಚ್ಚಿರುತ್ತವೆ. ಒಂದು ನೀಲಿ ಬಣ್ಣದ ರೆಡಿಮೇಡ್ ಬನಿಯಾನ್ ಧರಿಸಲಾಗಿದ್ದು, ಮೃತ ಮಗುವಿನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತ ಮಗುವಿನ ಹೋಲಿಕೆಯ ಮಗು ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532–231716 ಅಥವಾ ಮೊಬೈಲ್ ಸಂಖ್ಯೆ: 9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ: 080–22871291ಗೆ ಸಂಪರ್ಕಿಸುವಂತೆ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾರಸುದಾರರು ಪತ್ತೆಗೆ ರೈಲ್ವೇ ಪೊಲೀಸರಿಂದ ಮನವಿ

**ರಾಯಚೂರು,ಜೂ.26–**ಇಲ್ಲಿನ ರೈಲ್ವೇ ಪೊಲೀಸಸ ಠಾಣೆ ವ್ಯಾಪ್ತಿಯ ರಾಯಚೂರು ರೈಲು ನಿಲ್ದಾಣದ ವೇದಿಕೆ ನಂ: 01ರ ಹತ್ತಿರ ದಾದರ್ ಕೆಳಗಡೆ, ಸುಮಾರು–40–50 ವಯೋಮಾನದ ಒಬ್ಬ ಅಪರಿಚಿತ ಗಂಡಸು ಯಾವುದೋ ಖಾಯಿಲೆಯಿಂದ ಬಳಲಿ ಸ್ವಾಭಾವಿಕವಾಗಿ ಮೃತಪಟ್ಟ ಬಗ್ಗೆ ಠಾಣಾ ಯು.ಡಿ.ಆರ್ ನಂ 40/2025, 194 ಬಿಎನ್‌ಎಸ್‌ಎಸ್ ರಿತ್ಯಾ ಪ್ರಕರಣ ದಾಖಲಿಸಿಕೊಂಡು ವಾರಸುದಾರರು ಪತ್ತೆಗೆ ಕೋರಲಾಗಿದೆ.

ಮೃತದೇಹ ದೊರೆತ ಘಟನಾ ಸ್ಥಳಗಳಲ್ಲಿ ಮೃತನ ವಾರಸುದಾರರು ಯಾರು ಪತ್ತೆಯಾಗಿರುವುದಿಲ್ಲ. ಆದ್ದರಿಂದ ಮೃತನ ವಾರುಸುದಾರ ಪತ್ತೆ ಹಾಗೂ ಪಿ.ಎಂ.ಇ. ಸಲುವಾಗಿ ಮೃತದೇಹವನ್ನು ರಾಯಚೂರಿನ ರಿಮ್ಸ್ ಆಸ್ಪತ್ರೆಯ ಶೀತಲ ಶವಗಾರದಲ್ಲಿಟ್ಟಿರುತ್ತದೆ.

ಮೃತ ದೇಹದ ಚಹರೆ: ವಯಸ್ಸು ಸುಮಾರು 40–50 ವರ್ಷ, ಎತ್ತರ ಸುಮಾರು 5.2 ಅಡಿ, ಉದ್ದವಾದ ಮುಖ, ಸಾದಾ ಕಪ್ಪು ಮೈ ಬಣ್ಣ, ಬಡಕಲು ಮೈ ಕಟ್ಟು, ತಲೆಯಲ್ಲಿ 8 ಇಂಚು ಕಪ್ಪು ಬಿಳಿ ಕೂದಲು, 02 ಇಂಚು ಗಡ್ಡ, 01 ಇಂಚು ಮೀಸೆ ಉದ್ದವಾದ ಮೂಗು ಇರುತ್ತದೆ. ಒಂದು ಕ್ರೀಮ್ ಬಣ್ಣದ ರೆಡಿಮೇಡ್ ಫುಲ್ ಶರ್ಟ, ಒಂದು ಬೂದು ಬಣ್ಣದ ಪ್ಯಾಂಟ್, ಒಂದು ಹಸಿರು ನೀಲಿ ಬಣ್ಣದ ಟಾವೆಲ್ ಧರಿಸಲಾಗಿದ್ದು, ಈ ಅಪರಿಚಿತ ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತನ ಹೋಲಿಕೆಯ ಪುರುಷ ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532–231716 ಅಥವಾ ಮೊಬೈಲ್ ಸಂಖ್ಯೆ: 9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ: 080–22871291ಗೆ ಸಂಪರ್ಕಿಸುವಂತೆ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಟುಂಬ ಪಿಂಚಣಿದಾರರಿಗೆ ಹೊಸ ವೇತನ ಶ್ರೇಣಿ ಪರಿಷ್ಕರಿಸಲು ರೋಣದ್ ಆಗ್ರಹ

**ಚಿತ್ತಾಪುರ:ಜೂ.26–** ನಿವೃತ್ತಿ ಸರ್ಕಾರಿ ನೌಕರರಿಗೆ ಪಿಂಚಣಿ ಮತ್ತು ಕುಟುಂಬ ಪಿಂಚಣಿದಾರರಿಗೆ ಹೊಸ ವೇತನ ಶ್ರೇಣಿ ಪರಿಷ್ಕರಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘ ತಾಲೂಕು ಶಾಖೆಯ ನೇತೃತ್ವದಲ್ಲಿ ಪ್ರತಿಭಟಿಸಿದ ನೌಕರರು ಪ್ರಧಾನ ಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಅವರಿಗೆ ಸಲ್ಲಿಸಿದರು.



ಈ ವೇಳೆ ತಾಲೂಕು ಅಧ್ಯಕ್ಷ ರೇವಣಸಿದ್ದಪ್ಪ ರೋಣದ್ ಮಾತನಾಡಿ, ಕೇಂದ್ರ ಸರ್ಕಾರವು 2004 ರಲ್ಲಿ ಹೊಸ ಪಿಂಚಣಿಯನ್ನು ಜಾರಿ ತರಲಾಗಿದೆ ಹಾಗೂ ಎಲ್ಲಾ ರಾಜ್ಯಗಳು ಸಹ ಕೇಂದ್ರ ಸರ್ಕಾರದ ಮಾದರಿಯಲ್ಲಿ ಹೊಸದಾಗಿ ಸರ್ಕಾರಿ ಸೇವೆಗೆ ಸೇರಿದ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗುತ್ತಿದೆ. ಇದರಿಂದ ನಿವೃತ್ತ ಹೊಂದಿದ ಸರ್ಕಾರಿ ನೌಕರರು ಆರ್ಥಿಕ ಸೌಲಭ್ಯದಿಂದ ವಂಚಿತರಾಗುತ್ತಾರೆ ಎಂದು ತಿಳಿಸಿದ್ದಾರೆ. ಇತ್ತೀಚೆಗೆ ಕೇಂದ್ರ ಸರ್ಕಾರವು ಸರ್ಕಾರಿ ನೌಕರರಿಗೆ ಹಾಗೂ ಪಿಂಚಣಿದಾರರಿಗೆ ಹೊಸ ವೇತನ ಶ್ರೇಣಿ ಪರಿಷ್ಕರಿಸಲು 8ನೇ ವೇತನ ಆಯೋಗ ರಚನೆ ಮಾಡಲಾಗಿದೆ. ಆಯೋಗದ ವರದಿಯು ಪ್ರಗತಿ ಹಂತದಲ್ಲಿದೆ ಎಂದು ತಿಳಿಸಿದ್ದಾರೆ.

ಈ ಮಧ್ಯೆ ಕೇಂದ್ರ ಸರ್ಕಾರವು ಮಾರ್ಚ್ 25 ರಂದು ಲೋಕಸಭೆಯಲ್ಲಿ ಆರ್ಥಿಕ ಬಿಲ್ಲು ಮಂಡಿಸಿ 1 ಏಪ್ರಿಲ್ 2026 ಕ್ಕೆ ಮೊದಲು ನಿವೃತ್ತಿಯಾದ ಸರ್ಕಾರಿ ನೌಕರರಿಗೆ ಪಿಂಚಣಿ ಮತ್ತು ಕುಟುಂಬ ಪಿಂಚಣಿಯನ್ನು ಪರಿಷ್ಕರಿಸಲು ಸಾಧ್ಯವಿಲ್ಲವೆಂಬ ನಿರ್ಣಯವನ್ನು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ರವರು ಲೋಕಸಭೆಯಲ್ಲಿ ಮಂಡಿಸಿದ್ದಾರೆ. ಇದರಿಂದ ನಿವೃತ್ತ ಸರ್ಕಾರಿ ನೌಕರ ಪಿಂಚಣಿದಾರರಿಗೆ ಮತ್ತು ಕುಟುಂಬ ಪಿಂಚಣಿದಾರರಿಗೆ 8ನೇ ವೇತನ ಆಯೋಗದಲ್ಲಿ ಪರಿಷ್ಕರಿಸಲು ಸಾಧ್ಯವಾಗುವುದಿಲ್ಲವೆಂದು ತಿಳಿಸಿದ್ದಾರೆ. ಇದರಿಂದ ನಿವೃತ್ತ ಪಿಂಚಣಿದಾರರು ಮತ್ತು ಕುಟುಂಬ ಪಿಂಚಣಿದಾರರು ಸಂಕಷ್ಟಕ್ಕೆ ಒಳಗಾಗುತ್ತಾರೆ. ಈ ಕುರಿತು ಈಗಾಗಲೇ ದೆಹಲಿಯಲ್ಲಿ ನಾಲ್ಕು ಬಲವಾದ ಸಂಘಟನೆಗಳು ಹೋರಾಟಕ್ಕಿಳಿದಿವೆ ಎಂದು ಹೇಳಿದರು. ಈ ಸಂಘಟನೆಗಳಿಗೆ ಬಲ ಪಡಿಸಲು ಕರ್ನಾಟಕ ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘ ಬೆಂಗಳೂರ ಅಧ್ಯಕ್ಷ ಎಲ್.ಬೈರಪ್ಪನವರು ಜೂನ್ 21 ರಂದು ನಡೆಸಿದ ಕಾರ್ಯಕಾರಣಿ ಸಭೆಯಲ್ಲಿ ನಿರ್ಣಯಿಸಿ ತಿಳಿಸಿರುವಂತೆ ಚಿತ್ತಾಪುರ ತಾಲೂಕು ನಿವೃತ್ತ ಸರ್ಕಾರಿ ನೌಕರ ಸಂಘದ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಗಿದೆ ಎಂದು ಹೇಳಿದರು.

ಸಂಘದ ಗೌರವಾಧ್ಯಕ್ಷ ವಿಜಯಕುಮಾರ್ ಲೊಡ್ಡೆನೋರ, ಉಪಾಧ್ಯಕ್ಷರಾದ ಕಿಶನ್ ರಾಠೋಡ, ಮಹಾದೇವಪ್ಪ ಉಪ್ಪಾರ, ಖಜಾಂಚಿ ಮಲ್ಲಣ್ಣ ಮುಡಬೂಳ, ಪ್ರಧಾನ ಕಾರ್ಯದರ್ಶಿ ಶಶೀಧರ ಪಾಟೀಲ, ಸಹ ಕಾರ್ಯದರ್ಶಿ ಸುಭಾಷ್ ಮೇಗಂಜಿ, ಬಾಬು ಕರದಾಳ, ಶಮೀಮ್, ಕಾನೂನು ಸಲಹೆಗಾರ ಮೋತಿಲಾಲ್ ಚವ್ಹಾಣ, ಸಾಂಸ್ಕೃತಿಕ ಕಾರ್ಯದರ್ಶಿ ದೇವಪ್ಪ ನಂದೂರಕರ್, ಕ್ರೀಡಾ ಕಾರ್ಯದರ್ಶಿ ಶಿವನಾಗಪ್ಪ ಮುತ್ತಲಗಡ್ಡಿ, ಜಂಟಿ ಕಾರ್ಯದರ್ಶಿ ಹಾಜಪ್ಪ ಬಿಳಾರ್, ನಿರ್ದೇಶಕರಾದ ಬಸವರಾಜ ಕಲಬುರಗಿ, ತುಕಾರಾಮ ಕೆ. ನಾಯಕ, ನಿಂಗಪ್ಪ ಮಲ್ಕನ್, ಸಿದ್ದಯ್ಯ ಸ್ಥಾವರಮಠ, ಮಲ್ಲಿಕಾರ್ಜುನ ಮಲಕೂಡ, ಮುನಿಯಪ್ಪ, ಶಾಂತಾಬಾಯಿ, ಸರಳಬಾಯಿ, ಮಲ್ಲೇಶಪ್ಪ, ಮಳರೆಡ್ಡಿ ಸೇರಿದಂತೆ ಇತರರು ಇದ್ದರು.

# ಸೇಡಂಗೆ ಮಳೆ ತಂದ ನಮ್ಮ ಸಚಿವರು

**ಸೇಡಂ, ಜೂ,26–** ತಾಲೂಕಿನಲ್ಲಿ ಮುಂಗಾರು ಹಂಗಾಮಿನಲ್ಲಿ ಹೆಸರು ಉದ್ದು ತೊಗರಿ ಬಿತ್ತನೆ ಮಾಡಿದ ರೈತರು ಒಂದು ವಾರದಿಂದ ಮಳೆ ಇಲ್ಲದೆ ರೈತರು ದೇವರ ಮೊರೆ ಹೋಗಿದರು. ನಮ್ಮ ನೆಚ್ಚಿನ ನಾಯಕರು ವೈದ್ಯಕೀಯ ಶಿಕ್ಷಣ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್ ಊಡಗಿ ರವರು ವಿವಿಧ ಕಾರ್ಯಕ್ರಮಗಳ ಪ್ರಯುಕ್ತ ತಾಲೂಕ್ಗೆ ಆಗಮಿಸುತ್ತಿದ್ದಂತೆ ಸಚಿವರು ಮಳೆಯನ್ನೂ ತಂದಿದ್ದಾರೆ, ರೈತರು ನಿಟ್ಟಿಸಿರು ಬಿಡುವಂತೆ ಆಗಿದ್ದು ಉದ್ದು ಹೆಸರು ತೊಗರಿಗೆ ಮಳೆಯಿಂದ ಸಹಕಾರಿಯಾಗಿದೆ ಎಂದು ಕುರುಕುಂಟದಲ್ಲಿ ಆಸ್ಪತ್ರೆ ಉದ್ಘಾಟನೆ, ಕನಕ ಭವನ



ಹಾಗೂ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಮಳೆಯಲ್ಲಿಯೇ ಚಾಲನೆ ನೀಡಿದ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಕುರುಕುಂಟದಲ್ಲಿ ಸಂಭ್ರಮಿಸುತ್ತಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ರಾಮನಗರದಲ್ಲಿಯೇ ನನ್ನ ಮುಂದಿನ ಚುನಾವಣೆ : ನಿಖಿಲ್ ಕುಮಾರಸ್ವಾಮಿ



**ರಾಮನಗರ, ಜೂ.26–** ಚುನಾವಣೆಗೆ ನಿಲ್ಲುವ ಸಮಯ ಬಂದರೆ ರಾಮನಗರದಲ್ಲಿಯೇ ನನ್ನ ಮುಂದಿನ ಚುನಾವಣೆ. ಯಾವುದೇ ಕಾರಣಕ್ಕೂ ನಾನು ಜಿಲ್ಲೆಯಿಂದ ಪಲಾಯನ ಮಾಡುವುದಿಲ್ಲ ಎಂದು ದೃಢ ಸಂಕಲ್ಪವನ್ನು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ವ್ಯಕ್ತಪಡಿಸಿದ್ದಾರೆ.

ಇದು ನಮ್ಮ ಸ್ವ ಕ್ಷೇತ್ರ, ನೀವು ಬೆಳೆಸಿದ ಮನೆ ಮಕ್ಕಳು ನಾವು. ನಮ್ಮನ್ನು ಪ್ರೀತಿಯಿಂದ ಹರಸಿದ್ದೀರಿ. ಬೆಳೆಸಿದ್ದೀರಿ. ಯಾವುದೇ ಕಾರಣಕ್ಕೂ ಜಿಲ್ಲೆಯಿಂದ ಪಲಾಯನ ಮಾಡುವುದಿಲ್ಲ. ಸೋಲು–ಗೆಲುವು ಸರ್ವೇ ಸಾಮಾನ್ಯ. ನನ್ನ ಮೂರು ಸೋಲುಗಳು ನನಗೆ ರಾಜಕೀಯವಾಗಿ ಪರಿಪಕ್ವತೆಯನ್ನು ಕಲಿಸಿವೆ. ಈ ಸೋಲುಗಳಿಂದ ಕುಗ್ಗದೆ ಮತ್ತೆ ಅವಕಾಶ ಸಿಕ್ಕರೆ ರಾಮನಗರದಿಂದಲೇ ಸ್ಪರ್ಧೆ ಮಾಡುವುದಾಗಿ ತಿಳಿಸಿದ್ದಾರೆ.

ರಾಮನಗರ ವಿಧಾನಸಭಾ ಕ್ಷೇತ್ರದಲ್ಲಿ ಆಯೋಜಿಸಲಾಗಿದ್ದ ಆರನೇ ದಿನದ ಕಾರ್ಯಕರ್ತರ ಸಭೆ ಹಾಗೂ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ದೆಹಲಿಯಲ್ಲಿ ಕೆಲಸವಿಲ್ಲ. ರಾಜ್ಯಕ್ಕೆ ಬರುತ್ತಾರೆಂಬ ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ ಮಾವು ಬೆಳೆಗಾರರಿಗೆ ಬೆಂಬಲ ಬೆಲೆಯನ್ನು ಡಿ.ಕೆ ಸುರೇಶ್ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಕೊಡಿಸಿದ್ರಾ? ಎಂದು ಟಾಂಗ್ ನೀಡಿದ್ದಾರೆ.

ಮಾವಿನ ಹಣ್ಣಿನ ಬೆಲೆ ಕುಸಿತದಿಂದ ಸಂಕಷ್ಟದಲ್ಲಿದ್ದ ರೈತರಿಗೆ ಕುಮಾರಣ್ಣ ನೆರವಿಗೆ ಬಂದಿದ್ದಾರೆ. ಕೇಂದ್ರ ಕೃಷಿ ಸಚಿವರಿಗೆ ಪತ್ರ ಬರೆದು ಮನವಿ ಮಾಡಿದ್ದ ಕುಮಾರಣ್ಣ ಅವರ ಮನವಿಗೆ ಸ್ಪಂದಿಸಿ ಕೇಂದ್ರ ಸರ್ಕಾರ ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆಯಡಿ ಬೆಂಬಲ ಬೆಲೆ ಘೋಷಿಸಿದೆ. ಹೆಸರು ಬದಲಾವಣೆ ಮಾಡುವುದರಿಂದ ಅಭಿವೃದ್ಧಿ ಆಗಲ್ಲ. ಕೆಂಗಲ್ ಹನುಮಂತಯ್ಯ ಅವರು ಕಟ್ಟಿದ ರಾಮನಗರ ಹೆಸರನ್ನು ಕಾಂಗ್ರೆಸ್ ಅಳಿಸಿದೆ. ಆದರೆ ರಾಮನಗರ ಜನರ ಹೃದಯದಲ್ಲಿ ರಾಮನಗರ ಶಾಶ್ವತವಾಗಿ ಉಳಿದಿದೆ ಎಂದು ಅವರು ಹೇಳಿದ್ದಾರೆ.

ಮಾಜಿ ಶಾಸಕರು ಹಾಗೂ ಜಿಲ್ಲಾಧ್ಯಕ್ಷರಾದ ಎ. ಮಂಜುನಾಥ್, ತಾಲ್ಲೂಕು ಅಧ್ಯಕ್ಷರಾದ ಸಬ್ಬಕೆರೆ ಶಿವಲಿಂಗಪ್ಪ, ನಗರಸಭಾ ಸದಸ್ಯ ಮಂಜುನಾಥ್, ಮಾಜಿ ನಗರಸಭೆ ಸದಸ್ಯ ರವಿ, ಮುಖಂಡರುಗಳಾದ ಪ್ರಕಾಶ್, ಎಸ್ ಸಿ ರಾಜಣ್ಣ, ಲಕ್ಷ್ಮೀ ಗೂಳಿಗೌಡ, ಹಾರೋಹಳ್ಳಿ ರಾಮಣ್ಣ, ಕೆಂಪಣ್ಣ, ವಾಸು, ದೊರೆ, ಉಮೇಶ್, ಬಿಡದಿ ಶೇಷಪ್ಪ, ವೆಂಕಟೇಶ ಮೊದಲಾದವರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಪ್ಯಾರಾಸಿಟಮಲ್ ಮಾತ್ರೆ ಗುಣಮಟ್ಟ ವೈಫಲ್ಯವಾಗಿವೆ : ಸಚಿವ ಗುಂಡೂರಾವ್

**ಬೆಂಗಳೂರು, ಜೂ.26–** ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ಇಲಾಖೆ ನಡೆಸಿದ ಮಾಸಿಕ ತಪಾಸಣೆಯಲ್ಲಿ ಪ್ಯಾರಸಿಟಮಲ್ ಮಾತ್ರೆಗಳು ಗುಣಮಟ್ಟದಲ್ಲಿ ವೈಫಲ್ಯವಾಗಿವೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಮೊದಲು ಸಣ್ಣಪುಟ್ಟ ಔಷಧಿಗಳನ್ನು ಮಾತ್ರ ಪರೀಕ್ಷೆಗೊಳಪಡಿಸಲಾಗುತ್ತಿತ್ತು. ಇಲಾಖೆಯ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆಯನ್ನು ನೀಡಿದ್ದು, ಮಾರ್ಗಸೂಚಿಯನುಸಾರ ಎಲ್ಲಾ ಔಷಧಿಗಳನ್ನೂ ತಪಾಸಣೆಗೆ ಒಳಪಡಿಸಲಾಗಿದೆ. ಅದರ ಪ್ರಕಾರ, ಪ್ರತೀ ತಿಂಗಳು ಔಷಧಿ, ಕಾಂತಿವರ್ಧಕ ಮತ್ತು ಸೌಂದರ್ಯವರ್ಧಕಗಳನ್ನು ಸ್ಯಾಂಪಲ್ ಪಡೆದು ಪರೀಕ್ಷೆಗೆ ಒಳಪಡಿಸಲಾಗಿತ್ತು. ಅದರಲ್ಲಿ ಕುಂಕುಮ ಹಾಗೂ ಪ್ಯಾರಸಿಟಮಲ್ ಔಷಧಿಗಳು ಗುಣಮಟ್ಟದಲ್ಲಿ ವೈಫಲ್ಯವಾಗಿವೆ ಎಂದಿದ್ದಾರೆ.

ಔಷಧಿಗಳ ನಿಯಮಿತ ಪರಿಶೀಲನೆ ಹಾಗೂ ಗುಣಮಟ್ಟ ವೈಫಲ್ಯವಾದ ಸಂದರ್ಭದಲ್ಲಿ ಔಷಧಿಗಳನ್ನು ಹಿಂಪಡೆಯಲು ಅನುಕೂಲವಾಗುವಂತೆ ವಿಶೇಷವಾದ ನೀತಿಯನ್ನು ರೂಪಿಸಲಾಗುತ್ತಿದೆ. ಅದರ ಪ್ರಕಾರ, ಮುಂದಿನ ದಿನಗಳಲ್ಲಿ ಕಳಪೆ ಮಟ್ಟದ ಔಷಧಿ, ಕಾಂತಿವರ್ಧಕ, ಸೌಂದರ್ಯವರ್ಧಕ ಹಾಗೂ ಆಹಾರ ಉತ್ಪಾದನೆಯಲ್ಲಿ ಬಳಸುವ ರಾಸಾಯನಿಕಗಳ ಗುಣಮಟ್ಟ ಪರಿಶೀಲನೆಗೆ ಒಳಪಡಿಸಿ ಕಳಪೆ ಕಂಡುಬಂದಾಗ ಕ್ರಿಮಿನಲ್ ಕೇಸ್ ದಾಖಲಿಸಿ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುವುದು. ಜೊತೆಗೆ ಮಾರುಕಟ್ಟೆಯಿಂದ ಸದರಿ ಸರಕನ್ನು ಸಂಪೂರ್ಣವಾಗಿ ಹಿಂಪಡೆಯಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಈ ವಿಚಾರವಾಗಿ ರಾಷ್ಟ್ರಮಟ್ಟದಲ್ಲಿ ಕಾನೂನು ರೂಪುಗೊಳ್ಳಬೇಕು. ಅದಕ್ಕಾಗಿ ನಾವು ಕೇಂದ್ರ ಸರ್ಕಾರಕ್ಕೆ ಪತ್ರವನ್ನೂ ಬರೆದಿದ್ದೆ. ಅಲ್ಲಿಂದ ಸರಿಯಾದ ಉತ್ತರ ಬಂದಿಲ್ಲ. ನಮ್ಮ ಸರ್ಕಾರ ನಮ್ಮದೇ ವ್ಯಾಪ್ತಿಯಲ್ಲಿ ಕೈ ಕಟ್ಟಿ ಕೂರದೇ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತದೆ ಎಂದು ತಿಳಿಸಿದರು.ಔಷಧಿ ಗುಣಮಟ್ಟಗಳ ಪರಿಶೀಲನೆಯ ಸಮಗ್ರ ಮಾಹಿತಿಯನ್ನು ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿದೆ. ಸಾರ್ವಜನಿಕರು ಸ್ವಯಂ ವೈದ್ಯ ಮಾಡಿಕೊಳ್ಳುವ ಬದಲಾಗಿ ವೈದ್ಯರ ತಪಾಸಣೆಗೊಳಗಾಗಬೇಕು. ವೈದ್ಯಕೀಯ ಶಿಫಾರಸು ಆಧರಿಸಿಯೇ ಔಷಧಿ ತೆಗೆದುಕೊಳ್ಳಬೇಕು. ಈ ನಿಟ್ಟಿನಲ್ಲಿ ಜನರಿಗೆ ಹೆಚ್ಚಿನ ಜಾಗೃತಿ ಮೂಡಿಸಲಾಗುತ್ತದೆ ಎಂದರು.



ಪ್ಯಾರಸಿಟಮಲ್ ಸೇರಿದಂತೆ ಯಾವುದೇ ಔಷಧಿಯಾಗಿದ್ದರೂ ಬ್ಯಾಚ್ಗಳ ಆಧಾರದ ಮೇಲೆ ಪರಿಶೀಲಿಸಲಾಗುತ್ತದೆ. ಒಟ್ಟಾರೆ ಎಲ್ಲಾ ಔಷಧಿಯೂ ಕಳಪೆ ಎಂದು ಹೇಳಲಾಗುವುದಿಲ್ಲ. ಪರೀಕ್ಷೆಗೊಳಪಟ್ಟ ಔಷಧಿಗಳ ಗುಣಮಟ್ಟವನ್ನು ಮಾತ್ರ ಆಧರಿಸಿ ಫಲಿತಾಂಶವನ್ನು ಪ್ರಕಟಿಸಲಾಗುತ್ತದೆ.

ಗುಣಮಟ್ಟದಲ್ಲಿ ವೈಫಲ್ಯಗೊಂಡ ಔಷಧಿಗಳ ಇತರ ಬ್ಯಾಚ್ಗಳನ್ನು ಹೆಚ್ಚಿನ ತಪಾಸಣೆಗೊಳಪಡಿಸಲಾಗುತ್ತದೆ. ರಾಜ್ಯಸರ್ಕಾರದ ಈ ಕ್ರಮದಿಂದ ಔಷಧಿ ಹಾಗೂ ಇತರ ವಸ್ತುಗಳ ತಯಾರಿಕರ ಜವಾಬ್ದಾರಿ ಹೆಚ್ಚಾಗುತ್ತದೆ. ಸರ್ಕಾರ ನಿಯಮಿತ ಪರಿಶೀಲನೆಗೊಳಪಡಿಸುತ್ತದೆ ಎಂಬ ಕಾರಣಕ್ಕೆ ಗುಣಮಟ್ಟ ಕಾಯ್ದುಕೊಳ್ಳಲು ಅನುಕೂಲವಾಗಲಿದೆ ಎಂದು ತಿಳಿಸಿದರು.

# ರಾಜ್ಯ ರಾಜಕೀಯದಲ್ಲಿ ಬದಲಾವಣೆಯ ಚರ್ಚೆಗಳು ಮುನ್ನಲೆಗೆ



**ಬೆಂಗಳೂರು,ಜೂ.26–** ರಾಜ್ಯ ರಾಜಕೀಯದಲ್ಲಿ ಬದಲಾವಣೆಯ ಚರ್ಚೆಗಳು ಮತ್ತೊಮ್ಮೆ ಗರಿಗೆದರಿವೆ. ಈವರೆಗೂ ಮುಖ್ಯಮಂತ್ರಿ ಅಧಿಕಾರದ ಬದಲಾವಣೆಗಳ ಬಗ್ಗೆ ಚರ್ಚೆಗಳಾಗಿದ್ದವು. ಆದರೆ ಪ್ರಸ್ತುತ ಚರ್ಚೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಸ್ಥಾನ, ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆಗಳು ಹಾಗೂ ಪ್ರಮುಖ ಖಾತೆಗಳ ಪರಿಷ್ಕರಣೆಯ ಬಗ್ಗೆ ಗಂಭೀರ ಚರ್ಚೆ ನಡೆಯುತ್ತಿವೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ತಮ ಆಪ್ತ ಸಚಿವರಾದ ಸತೀಶ್ ಜಾರಕಿಹೊಳಿ, ಕೆ.ಜೆ.ಜಾರ್ಜ್, ಎಚ್.ಸಿ.ಮಹದೇವಪ್ಪ ಅವರ ಜೊತೆ ದೆಹಲಿಗೆ ಭೇಟಿ ನೀಡಿದ್ದರು. ಅಲ್ಲಿ ಸಚಿವರೊಟ್ಟಿಗೆ ಹೈಕಮಾಂಡ್ ನಾಯಕರು ಮೊದಲ ಸುತ್ತಿನ ಚರ್ಚೆ ನಡೆಸಿದ್ದು, ನಂತರ ಸಿದ್ದರಾಮಯ್ಯರೊಂದಿಗೆ ಪ್ರತ್ಯೇಕ ರಹಸ್ಯ ಸಮಾಲೋಚನೆ ನಡೆಸಿದ್ದಾರೆ. ಇದು ತೀವ್ರ ಕುತೂಹಲ ಕೆರಳಿಸಿದೆ.

ದೆಹಲಿಯ ಭೇಟಿಯ ವೇಳೆ ಡಿ.ಕೆ.ಶಿವಕುಮಾರ್‌ರವರ ವರ್ತನೆಗಳ ಬಗ್ಗೆ ದೂರುಗಳ ಸುರಿಮಳೆಯೇ ಆಗಿವೆ. ಕಾಂಗ್ರೆಸ್‌ನ ಶಾಸಕ ರಾಜು ಕಾಗೆ ಹೇಳಿದಂತೆ ಸಚಿವರು ಮುಖ ಕೊಟ್ಟು ಮಾತನಾಡುತ್ತಿಲ್ಲ. ಶಾಸಕರನ್ನು ಹಾದಿ ಮಧ್ಯೆಯೇ ನಿಲ್ಲಿಸಿ ಮನವಿ ತೆಗೆದುಕೊಳ್ಳುತ್ತಾರೆ, ಮತ್ತಿನ್ಯಾರೊಂದಿಗೋ ಮಾತನಾಡುತ್ತಾ ಮುಂದೆ ಹೋಗುತ್ತಿರುತ್ತಾರೆ, ಶಾಸಕರು ಅವರ ಹಿಂದೆ ಓಡಿಹೋಗಬೇಕು, ಈ ರೀತಿಯ ದುಸ್ಥಿತಿ ಯಾರಿಗೂ ಬೇಡ ಎಂದು ಹೇಳಿದರು.

ರಾಜು ಕಾಗೆ ಹೆಸರು ಹೇಳದೇ ಇದ್ದರೂ ಅದು ಡಿ.ಕೆ.ಶಿವಕುಮಾರ್‌ರವರ ಕುರಿತಾದ ವ್ಯಾಖ್ಯಾನ ಎಂದು ಚರ್ಚೆಗಳಾಗುತ್ತಿವೆ. ಬಹುತೇಕ ಶಾಸಕರು ಒಳಗೊಳಗೇ ಕುದಿಯುತ್ತಿದ್ದು, ಬಹಿರಂಗ ಟೀಕೆ ಮಾಡಲಾಗದೆ, ಕೈಕೈ ಹಿಸುಕಿಕೊಳ್ಳುತ್ತಿದ್ದಾರೆ. ಶಾಸಕಾಂಗ ಸಭೆಯಲ್ಲಿ ಡಿ.ಕೆ.ಶಿವಕುಮಾರ್‌ರವರನ್ನು ವೇದಿಕೆಯಲ್ಲಿ ಕೂರಿಸಿ ದೂರು ಕೇಳಿದರೆ ಯಾರು ತಾನೇ ಮಾತನಾಡಲು ಸಾಧ್ಯ. ಅದರ ಬದಲು ಶಾಸಕರಿಗೆ ಸಮಯ ಕೊಟ್ಟು ವೈಯಕ್ತಿಕವಾಗಿ ಅಭಿಪ್ರಾಯ ಆಲಿಸಿದರೆ ಸತ್ಯಾಂಶ ತಿಳಿಯಲಿದೆ. ಇದು ಮುಂದಿನ ದಿನದಲ್ಲಿ ಪಕ್ಷ ಸಂಘಟನೆಗೂ ಸಹಾಯವಾಗಲಿದೆ. ಇಲ್ಲವಾದರೆ ಸ್ಥಳೀಯ ಸಂಸ್ಥೆಗಳಲ್ಲೆ ಕಾಂಗ್ರೆಸ್ ಮುಗ್ಗರಿಸಲಿದೆ ಎಂಬ ಅಭಿಪ್ರಾಯವನ್ನು ದೆಹಲಿಗೆ ತಲುಪಿಸಲಾಗಿದೆ.

ಡಿ.ಕೆ.ಶಿವಕುಮಾರ್‌ರವರ ಬಳಿ ಕೆಪಿಸಿಸಿ ಅಧ್ಯಕ್ಷ ಸ್ಥಾನ, ಉಪಮುಖ್ಯಮಂತ್ರಿ ಹುದ್ದೆ, ಬೆಂಗಳೂರು ನಗರಾಭಿವೃದ್ಧಿ ಮತ್ತು ಜಲಸಂಪನೂಲಗಳಂತಹ ಪ್ರಮುಖ ಖಾತೆಗಳಿವೆ. ಇವುಗಳು ಜನಸಂಪರ್ಕ ಇರುವ ಹಾಗೂ ಹೆಚ್ಚಿನ ಅನುದಾನ ಪಡೆಯುವ ಸಚಿವಾಲಯಗಳಾಗಿವೆ.

ಡಿ.ಕೆ.ಶಿವಕುಮಾರ್ ಹಿಂದಿನ ಸರ್ಕಾರದ ಬಾಕಿ ಬಿಲ್‌ನ ನೆಪದಲ್ಲಿ ಹೊಸ ಯೋಜನೆಗಳಿಗೆ ಅನುಮೋದನೆ ನೀಡುತ್ತಿಲ್ಲ. ಶಾಸಕ ಎಚ್.ಸಿ.ಬಾಲಕೃಷ್ಣ ಹೇಳಿದಂತೆ ಡಿ.ಕೆ.ಶಿವಕು ಮಾರ್‌ರವರಿಗೆ ಜೈ ಎನ್ನುವವರಿಗೆ ಅನುದಾನ ದೊರೆಯುತ್ತಿದೆ. ಉಳಿದವರನ್ನು ಉದ್ದೇಶಪೂರಕವಾಗಿ ಕಡೆಗಣಿಸಲಾಗುತ್ತಿದೆ ಎಂದು ದೂರಲಾಗಿದೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ವಿರುದ್ಧವೂ ಆಕ್ಷೆ?ಪಗಳು ಕೇಳಿಬಂದಿವೆ.ಈ ಹಿಂದೆ ಕೆ.ಸಿ.ವೇಣುಗೋಪಾಲ್ ಬೆಂಗಳೂರಿಗೆ ಬಂದಾಗ ನಾಯಕರುಗಳ ಜೊತೆ ವೈಯಕ್ತಿಕ ಸಮಾಲೋಚನೆ ನಡೆಸುತ್ತಿದ್ದರು. ದೂರು ದುಮಾನಗಳನ್ನು ಕೇಳಿ ಬಗೆಹರಿಸುತ್ತಿದ್ದರು. ಸುರ್ಜೇವಾಲ ಕೇವಲ ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯನವರನ್ನು ಮಾತ್ರ ಕೇಂದ್ರಿ?ಕರಿಸಿ ಸಭೆ ನಡೆಸುತ್ತಿದ್ದಾರೆ. ಶಾಸಕರುಗಳ ವೈಯಕ್ತಿಕ ಭೇಟಿಗೆ ಸಮಯ ನೀಡುತ್ತಿಲ್ಲ ಎಂಬ ಆರೋಪಗಳಿವೆ.

ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿಯಾದ ಬಳಿಕ ರಾಜ್ಯದಲ್ಲಿ ಶಕ್ತಿ ಕೇಂದ್ರಗಳ ಸಂಖ್ಯೆ ಹೆಚ್ಚಾಗಿದೆ. ಹೀಗಾಗಿ ಜಾತಿವಾರು ಉಪಮುಖ್ಯಮಂತ್ರಿ ಹುದ್ದೆಗಳನ್ನು ಸೃಷ್ಟಿಸಬೇಕು ಎಂದು ಲೋಕಸಭೆ ಚುನಾವಣೆಯ ವೇಳೆ ಬೇಡಿಕೆಗಳಿದ್ದವು. ಈಗ ಅದೇ ಬೇಡಿಕೆಗಳನ್ನು ಪುನರುಚ್ಚರಿಸಲಾಗಿದೆ.

ಹೈಕಮಾಂಡ್ ನಾಯಕರು ಡಿ.ಕೆ.ಶಿವಕುಮಾರ್‌ರವರ ಒತ್ತಡಕ್ಕೆ ಮಣಿದು ಜಾತಿ ಜನಗಣತಿಗೆ ಬ್ರೆ?ಕ್ ಹಾಕಿದ್ದ ಬಗ್ಗೆಯೂ ಮುಖ್ಯಮಂತ್ರಿ ಮತ್ತವರ ತಂಡ ತೀವ್ರ ಅಸಮಾಧಾನವನ್ನು ವ್ಯಕ್ತಪಡಿಸಿರುವುದಾಗಿ ತಿಳಿಸಲಾಗಿದೆ.

ಡಿ.ಕೆ.ಶಿವಕುಮಾರ್‌ರಿಂದ ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ಹಿಂಪಡೆಯಬೇಕು. ಉಪಮುಖ್ಯಮಂತ್ರಿ ಹುದ್ದೆಯ ಜೊತೆಗೆ ಒಂದು ಇಲಾಖೆಯ ಜವಾಬ್ದಾರಿ ಮಾತ್ರ ವಹಿಸಬೇಕು ಎಂದು ಹೈಕಮಾಂಡ್ ಬಳಿ ಸಿದ್ದರಾಮಯ್ಯ ಮತ್ತವರ ಬೆಂಬಲಿಗರು ದೂರಿರುವುದಾಗಿ ತಿಳಿದುಬಂದಿದೆ.

# ಹೇಮಾವತಿ ಲಿಂಕ್ ಕೆನಾಲ್ ಸಭೆ ಮುಂದೂಡಿಕೆ

**ಬೆಂಗಳೂರು, ಜೂ.26–**ಕೇಂದ್ರ ಸಚಿವ ಸೋಮಣ್ಣ ಅವರ ಮನವಿ ಮೇರೆಗೆ ಇದೇ ತಿಂಗಳು 30ರಂದು ನಡೆಯಬೇಕಿದ್ದ ಹೇಮಾವತಿ ಲಿಂಕ್ ಕೆನಾಲ್ ಸಭೆಯನ್ನು ಜುಲೈ 4–5ಕ್ಕೆ ಮುಂದೂಡಲಾಗಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸದಾಶಿವನಗರ ನಿವಾಸದ ಬಳಿ ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಶಿವಕುಮಾರ್ ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಸೋಮಣ್ಣ ಅವರು ಸ್ಥಳೀಯ ಸಂಸದರೂ ಆಗಿರುವ ಕಾರಣ ಅವರಿಗೆ ಅನುಕೂಲವಾಗುವಂತೆ ಸಭೆ ಮುಂದೂಡಲಾಗಿದೆ. ಈ ಬಗ್ಗೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು.

**ಎತ್ತಿನಹೊಳೆ ಯೋಜನೆ ಗುತ್ತಿಗೆದಾರರ ಸಭೆ ಮುಂದೂಡಿಕೆ:**ಇಂದು ತುಮಕೂರಿನಲ್ಲಿ ಯೋಜನೆ ಕಾಮಗಾರಿಯ ಗುತ್ತಿಗೆದಾರರ ಸಭೆ ನಡೆಸಲು ತೀರ್ಮಾನಿಸಲಾಗಿತ್ತು. ಆದರೆ ಪರಮೇಶ್ವರ್ ಅವರ ಅನುಪಸ್ಥಿತಿ ಹಿನ್ನೆಲೆಯಲ್ಲಿ ಈ ಸಭೆಯನ್ನು ಬೆಂಗಳೂರಿಗೆ ಸ್ಥಳಾಂತರಿಸಲಾಗಿದೆ. ಈ ಸಭೆ ನಾಳೆ ಅಥವಾ ನಾಡಿದ್ದು ನಡೆಯಲಿದೆ" ಎಂದು ಹೇಳಿದರು. ಆದ್ಯತೆ ಮೇರೆಗೆ ಎತ್ತಿನಹೊಳೆ ಯೋಜನೆಯನ್ನು ನಿಗದಿತ ಸಮಯದ ಒಳಗೆ ಪೂರ್ಣಗೊಳಿಸಬೇಕು ಎಂದು ಮುಖ್ಯಮಂತ್ರಿಗಳ ನಿರ್ದೇಶನ ನೀಡಿದ್ದಾರೆ. ಹೀಗಾಗಿ ಈ ಯೋಜನೆ ಕಾಮಗಾರಿ ಪರಿಶೀಲನೆ ಮಾಡಲಾಗುತ್ತಿದೆ. ಈ ಯೋಜನೆಗೆ ಎಲ್ಲೆಲ್ಲಿ ಸಮಸ್ಯೆ ಇದೆ ಎಂದು ಪರಿಶೀಲನೆ ಮಾಡಲು ನಾನು ತುಮಕೂರಿಗೆ ಭೇಟಿ ನೀಡಿದ್ದೇನೆ" ಎಂದರು.

ನಾನು ಈಗಾಗಲೇ ದೊಡ್ಡಬಳ್ಳಾಪುರ, ಕೊರಟಗೆರೆಗೆ ಭೇಟಿ ನೀಡಿದ್ದೇನೆ. ಸಚಿವ ಸಂಪುಟ ಉಪ ಸಮಿತಿ ಅಧ್ಯಕ್ಷರಾಗಿದ್ದ ಪರಮೇಶ್ವರ್ ಅವರ ಜೊತೆ ಚರ್ಚೆ ಮಾಡಿದ್ದೇನೆ. ಈ ಭಾಗದಲ್ಲಿ ನೀರನ್ನು ಯಾವ ರೀತಿ ಸಂಗ್ರಹಿಸುವುದು ಎಂಬ ತಾಂತ್ರಿಕ ಸಾಧ್ಯತೆಗಳ ಪರಿಶೀಲನೆ ನಡೆಸುತ್ತಿದ್ದೇವೆ. ಈಗಾಗಲೇ ಸ್ಥಳೀಯ ನಾಯಕರು, ಗ್ರಾಮಸ್ಥರ ಜೊತೆ ಚರ್ಚೆ ಮಾಡಿ ಅಭಿಪ್ರಾಯ ಸಂಗ್ರಹಿಸಿದ್ದೇನೆ. ಸಾರ್ವಜನಿಕರು ತಮ್ಮ ನೋವು ಹೇಳಿಕೊಂಡಿದ್ದಾರೆ. ಒಂದು ಕಡೆ ಅಣೆಕಟ್ಟು ನಿರ್ಮಾಣ ಮಾಡಬೇಕೆ, ಎರಡು ಕಡೆ ಮಾಡಬೇಕೆ ಅಥವಾ ಜನರ ಸಲಹೆಯಂತೆ ಕೆರೆಗಳನ್ನು ಬಳಸಿಕೊಂಡು ನೀರು ಸಂಗ್ರಹಿಸಬಹುದೇ ಎಂಬ ಸಾಧ್ಯತೆಗಳನ್ನು ಅಧ್ಯಯನ ಮಾಡಲಾಗುವುದು" ಎಂದು ತಿಳಿಸಿದರು.



**ಅಧ್ಯಕ್ಷನಾಗಿ ಶಾಸಕರಿಂದ ಮಾಹಿತಿ ಸಂಗ್ರಹ:**ಶಾಸಕ ಬಿ.ಆರ್ ಪಾಟೀಲ್ ಅವರ ಭೇಟಿ ಬಗ್ಗೆ ಕೇಳಿದಾಗ, "ಪಕ್ಷದ ಅಧ್ಯಕ್ಷನಾಗಿ ನಾನು ವಾಸ್ತವಾಂಶ ತಿಳಿಯಬೇಕಾಗಿತ್ತು. ಹೀಗಾಗಿ ಅವರನ್ನು ಕರೆಸಿ ಮಾತನಾಡಿದೆ. ಅವರು ತಮ್ಮ ವಿಚಾರ ಹೇಳಿದ್ದಾರೆ. ನಾನು ಸಿಎಂ ಜೊತೆ ಚರ್ಚೆ ಮಾಡುತ್ತೇನೆ. ಸಚಿವ ಜಮೀರ್ ಅವರೊಂದಿಗೂ ಮಾತನಾಡುತ್ತೇವೆ. ಈ ಮಧ್ಯೆ ನಮ್ಮ ಪಕ್ಷದ ವರಿಷ್ಠರೂ ಕೂಡ ಆಗಮಿಸುತ್ತಿದ್ದು, ಎಲ್ಲರ ಜೊತೆ ಮಾತನಾಡಿ ಮಾಹಿತಿ ಪಡೆಯಲಿದ್ದಾರೆ" ಎಂದು ತಿಳಿಸಿದರು.

ಹಲವು ಶಾಸಕರು ಸರ್ಕಾರದ ವಿರುದ್ಧ ಧ್ವನಿ ಎತ್ತಿದ್ದು, ಇದು ಮುಖ್ಯಮಂತ್ರಿಗಳು ಆಡಳಿತದಲ್ಲಿ ಹಿಡಿತ ಕಳೆದುಕೊಳ್ಳುತ್ತಿದ್ದಾರೆಯೇ ಎಂದು ಕೇಳಿದಾಗ, "ಈ ವಿಚಾರವಾಗಿ ನನಗೆ ಮಾಹಿತಿ ಇಲ್ಲ. ಏನಾದರೂ ಇದ್ದರೆ ನಮ್ಮ ಪಕ್ಷದ ವರಿಷ್ಠರ ಜೊತೆ ನಾನು ಹಾಗೂ ಮುಖ್ಯಮಂತ್ರಿಗಳು ಮಾತನಾಡುತ್ತೇವೆ. ಆಡಳಿತದಲ್ಲಿ ಯಾವುದೇ ಹಿಡಿತ ಕಳೆದುಕೊಂಡಿಲ್ಲ. ಇದು ಮಾಧ್ಯಮಗಳ ಸೃಷ್ಟಿ" ಎಂದು ತಿಳಿಸಿದರು.

ಕಾಂಗ್ರೆಸ್ ಶಾಸಕರಿಗೆ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ಅವರು ಪತ್ರ ಬರೆದಿರುವ ಬಗ್ಗೆ ಕೇಳಿದಾಗ, "ಸುರೇಶ್ ಬಾಬು ಅವರು ಮೊದಲು ತಮ್ಮ ಪಕ್ಷ ಸರಿಪಡಿಸಿಕೊಳ್ಳಲಿ. ತಮ್ಮ ಕಾವಲಿಯಲ್ಲಿರುವ ತೂತು ಮುಚ್ಚಿಕೊಳ್ಳಲಿ. ಜಿ.ಟಿ ದೇವೇಗೌಡ ಸೇರಿದಂತೆ ಬೇರೆ ಶಾಸಕರ ವಿಚಾರ ಸರಿಪಡಿಸಲಿ" ಎಂದು ತಿರುಗೇಟು ನೀಡಿದರು.

# ಹೊಸ ಚಿತ್ರದ ಪೋಸ್ಟರ್ ಹಂಚಿಕೊಂಡ ರಶ್ಮಿಕಾ




**ಹೈದರಾಬಾದ್,ಜೂ.26–**ದಕ್ಷಿಣದ ಜೊತೆಗೆ ಬಾಲಿವುಡ್‌ನಲ್ಲಿಯೂ ಸದ್ದು ಮಾಡಿರುವ ನಟಿ ರಶ್ಮಿಕಾ ಮಂದಣ್ಣ ಗುರುವಾರ ತಮ್ಮ ಹೊಸ ಚಿತ್ರವನ್ನು ಘೋಷಿಸುವ ಮೂಲಕ ಅಭಿಮಾನಿಗಳಿಗೆ ದೊಡ್ಡ ಅಚ್ಚರಿ ಮೂಡಿಸಿದ್ದಾರೆ. ಅವರು ತಮ್ಮ ಇನ್‌ಸ್ಟಾ ಸ್ಟೋರಿಯಲ್ಲಿ ತಮ್ಮ ಹೊಸ ಚಿತ್ರದ ಪೋಸ್ಟರ್ ಅನ್ನು ಹಂಚಿಕೊಳ್ಳುವ ಮೂಲಕ ಅಭಿಮಾನಿಗಳ ಉತ್ಸಾಹವನ್ನು ಹೆಚ್ಚಿಸಿದ್ದಾರೆ. ಇದು ರಶ್ಮಿಕಾ ಅವರ ಮಹಿಳಾ ಕೇಂದ್ರಿತ ಚಿತ್ರವಾಗಲಿದೆ.

ಚಿತ್ರದ ಶೀರ್ಷಿಕೆ ಮತ್ತು ಮೊದಲ ನೋಟವನ್ನು ಜೂನ್ 27 ರಂದು ತಯಾರಕರು ಬಹಿರಂಗಪಡಿಸಲಿದ್ದಾರೆ ಎಂದು ತಿಳಿಸಲಾಗಿದೆ.ರಶ್ಮಿಕಾ ಮಂದಣ್ಣ ತಮ್ಮ ಹೊಸ ಚಿತ್ರದ ಪೋಸ್ಟರ್ ಹಂಚಿಕೊಂಡು ಹೀಗೆ ಬರೆದಿದ್ದಾರೆ  ನನ್ನ ಮುಂದಿನ ಚಿತ್ರದ ಶೀರ್ಷಿಕೆ ಏನೆಂದು ನೀವು ಊಹಿಸಬಲ್ಲಿರಾ? ಈ ಶೀರ್ಷಿಕೆಯನ್ನು ಯಾರೂ ಊಹಿಸಲು ಸಾಧ್ಯವಿಲ್ಲ ಎಂದು ನಾನು ಭಾವಿಸುತ್ತೇನೆ, ನೀವು ಈ ಶೀರ್ಷಿಕೆಯನ್ನು ಕಂಡುಕೊಂಡರೆ ನಾನು ನಿಮ್ಮನ್ನು ಭೇಟಿಯಾಗುತ್ತೇನೆ ಎಂದು ಭರವಸೆ ನೀಡುತ್ತೇನೆ.

ರಶ್ಮಿಕಾ ಮಂದಣ್ಣ ಅವರ ಈ ಟ್ವೀಟ್ ನಂತರ, ಅಭಿಮಾನಿಗಳು ಚಿತ್ರದ ಶೀರ್ಷಿಕೆಯನ್ನು ಹಂಚಿಕೊಳ್ಳುತ್ತಿದ್ದಾರೆ ಮತ್ತು ನಿರಂತರವಾಗಿ ಕಾಮೆಂಟ್ ಮಾಡುತ್ತಿದ್ದಾರೆ. ಚಿತ್ರದ ಪೋಸ್ಟರ್‌ನಲ್ಲಿ, ಒಂದು ಕಾಡನ್ನು ಕಾಣಬಹುದು, ಅದರಲ್ಲಿ ಮರದ ಕಾಂಡವು ಬೆಂಕಿಯಲ್ಲಿ ಉರಿಯುತ್ತಿದೆ. ಪೋಸ್ಟರ್‌ನಲ್ಲಿರುವ ಟ್ಯಾಗ್‌ಲೈನ್ ಶಿಕಾರ್, ಘಾಯಲ್ ಮತ್ತು ಅಟೂಟ್.

# ಕೊಲೆ ಆರೋಪಿಗಳ ಕಾಲಿಗೆ ಗುಂಡು: ಬಂಧನ



**ಹಾವೇರಿ,ಜೂ.26–** ಶಿಗ್ಗಾಂವಿ ಪಟ್ಟಣದ ಹೊರವಲಯದಲ್ಲಿ ಹಾಡಹಗಲೇ ಪ್ರಥಮ ದರ್ಜೆ ಗುತ್ತಿಗೆದಾರ ಶಿವಾನಂದ ಕುನ್ನೂರ ಅವರನ್ನು ಭೀಕರವಾಗಿ ಹತ್ಯೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳ ಕಾಲಿಗೆ ಗುಂಡು ಹಾರಿಸಿದ ಪೊಲೀಸರು ಅವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಗುಂಡೇಟಿನಿಂದ ಗಾಯಗೊಂಡಿರುವ ಆರೋಪಿಗಳಾದ ಆಶ್ರಫ್ ಹಾಗೂ ನಾಗರಾಜ್ ಎಂಬುವವರನ್ನು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ಸಾಗಿಸಲಾಗಿದೆ.ಹಾನಗಲ್ ತಾಲೂಕಿನ ಕೊಂಡೋಜಿ ಕ್ರಾಸ್ ಬಳಿ ಆರೋಪಿಗಳ ಕಾಲಿಗೆ ಗುಂಡು ಹಾರಿಸಿ ವಶಕ್ಕೆ ಪಡೆಯಲಾಗಿದ್ದು, ಸಿ.ಪಿ.ಐ. ಸತ್ಯಪ್ಪ ಮಾಳಗೊಂಡ ಹಾಗೂ ಪಿ.ಎಸ್.ಐ. ಸಂಪತ್ ಈ ಕಾರ್ಯಾಚರಣೆ ನಡೆಸಿದ್ದಾರೆ.

ಗುತ್ತಿಗೆದಾರ ಶಿವಾನಂದ ಕುನ್ನೂರ ಅವರ ಮೇಲೆ ದಾಳಿ ಮಾಡಿದ ತಂಡ ಕಬ್ಬಿಣದ ರಾಡ್ ಹಾಗೂ ತಲವಾರ್‌ಗಳಿಂದ ದಾಳಿ ನಡೆಸಿ ಹತ್ಯೆ ಮಾಡಿತ್ತು. ಕೊಂಡೋಜಿ ಕ್ರಾಸ್ ಬಳಿ ನಡೆದ ಫೈರಿಂಗ್‌ನಲ್ಲಿ ಗಾಯಗೊಂಡ ಆರೋಪಿಗಳಿಬ್ಬರನ್ನು ಮೊದಲು ಹಾವೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಿ ನಂತರ ಅಲ್ಲಿಂದ ಹುಬ್ಬಳ್ಳಿಯ ಕಿಮ್ಸ್ಗೆ ಸಾಗಿಸಲಾಯಿತು.ಹಾವೇರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶುಕುಮಾರ್ ನೇತೃತ್ವ ವಹಿಸಿದ್ದರು.

ಯುವ ಮಾರ್ಗ



## ಬೋಧಕೇತರ ಹುದ್ದೆಗಳ ನೇರ ನೇಮಕಾತಿ, ಹೊರಗುತ್ತಿಗೆ ಮೂಲಕ ಭರ್ತಿ ಇರುವುದಿಲ್ಲ

**ರಾಯಚೂರು,ಜೂ.26–** ರಾಯಚೂರಿನ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದಲ್ಲಿ ಪ್ರಸ್ತುತ ಯಾವುದೇ ಬೋಧಕೇತರ ಹುದ್ದೆಗಳನ್ನು ನೇರ ನೇಮಕಾತಿ ಅಥವಾ ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳುತ್ತಿರುವುದಿಲ್ಲ. ಸರ್ಕಾರದಿಂದ ಮಂಜೂರಾದ ಹುದ್ದೆಗಳನ್ನು ಸರ್ಕಾರದ ಅನುಮತಿ ಮೇರೆಗೆ ಕೆಟಿಪಿಪಿ ನಿಯಮಾನುಸಾರ ಟೆಂಡರ್ ಪ್ರಕ್ರಿಯೆ ಮುಖಾಂತರ ಸೇವೆ ಪಡೆಯಲಾಗುವುದು. ಇದನ್ನು ಹೊರತುಪಡಿಸಿ ಯಾವುದೇ ಮಧ್ಯವರ್ತಿಗಳ ಮೂಲಕವಾಗಲೀ ಅಥವಾ ಏಜನ್ಸಿ ಮೂಲಕವಾಗಲೀ ಆಮಿಷಕ್ಕೆ ಒಳಗಾಗಿ ಯಾರು ಸಹ ಮೋಸ ಹೋಗದಿರುವಂತೆ ಸಾರ್ವಜನಿಕರಲ್ಲಿ ರಾಯಚೂರಿರುವ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 9 ಎಂಬಿಬಿಎಸ್ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದಲ್ಲಿ ತುಂಬಲು ಜೂನ್ 30ರಂದು ನೇರ ಸಂದರ್ಶನ

**ರಾಯಚೂರು,ಜೂ.26–**ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟೀಯ ಆರೋಗ್ಯ ಅಭಿಯಾನದಡಿಯಲ್ಲಿ 2025–26 ನೇ ಸಾಲಿಗೆ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ವಿವಿಧ ಹುದ್ದೆಗಳ ನೇಮಕಾತಿಗಾಗಿ ಜೂನ್ 30ರಂದು ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದ್ದು, ಅರ್ಹ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.


ನಮ್ಮ ಕ್ಲಿನಿಕ್ ನಲ್ಲಿ 08 ಹುದ್ದೆಗಳು ಹಾಗೂ ಎನ್.ಯು.ಹೆಚ್.ಎಂ 01 ಹುದ್ದೆ ಸೇರಿದಂತೆ ಒಟ್ಟು 9 ಎಂ.ಬಿ.ಬಿ.ಎಸ್ ವೈದ್ಯಾಧಿಕಾರಿಗಳ ಹುದ್ದೆಗಳನ್ನು ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ಮೇರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು. ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳು ಜೂನ್ 30ರ ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನೇರ ಸಂದರ್ಶನ ಏರ್ಪಡಿಸಲಾಗಿದ್ದು, ಆಸಕ್ತರು ಭಾಗವಹಿಸಬಹುದಾಗಿದೆ.

ಈ ಗುತ್ತಿಗೆ ಆಧಾರದ ನೇಮಕಾತಿಯು ಎನ್.ಹೆಚ್.ಎಂ. ಹಾಗೂ ಎನ್.ಯು.ಹೆಚ್.ಎಂ. ನಿಯಮಾವಳಿಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ. ಅಲ್ಲದೆ ಹುದ್ದೆಗಳು ಖಾಲಿ ಇದ್ದಲ್ಲಿ ಪ್ರತಿ ಸೋಮವಾರ ನೇರ ಸಂದರ್ಶನ ಮೂಲಕ ಆಯ್ಕೆ ಮಾಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಜಿಲ್ಲಾ ಯೋಜನಾ ನಿರ್ವಹಣಾ ಘಟಕ ಅಧಿಕಾರಿಗಳ ಮೊಬೈಲ್ ಸಂಖ್ಯೆ : 9449843121ಗೆ ಕಚೇರಿಯ ಅವಧಿಯಲ್ಲಿ ಸಂಕರ್ಪ ಮಾಡಬಹುದಾಗಿದೆ. ಅಥವಾ ಕಚೇರಿಯ ಸೂಚನಾ ಫಲಕವನ್ನು ನೋಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂಬ, ವೈಯರ್, ಹೈಮಾಸ್ಟ್ ಮುಟ್ಟದಿರುವಂತೆ ಪಾಲಿಕೆಯಿಂದ ಸೂಚನೆ

**ರಾಯಚೂರು ಜೂನ್ 26 (ಕರ್ನಾಟಕ ವಾರ್ತೆ):** ಮಳೆಗಾಲ ಆರಂಭವಾದ ಪ್ರಯುಕ್ತ ರಾಯಚೂರು ನಗರದ ವಿವಿಧ ವಾರ್ಡಗಳಲ್ಲಿ ಅಳವಡಿಸಿರುವ ಮಿಡಿಯನ್ ದೀಪದ ಕಬ್ಬಿಣದ ಕಂಬಗಳು, ವೈರ್‌ಗಳನ್ನು ಹಾಗೂ ಹೈಮಾಸ್ಟಗಳನ್ನು ಸಾರ್ವಜನಿಕರು ಮುಟ್ಟದಿರುವಂತೆ ರಾಯಚೂರು ಮಹಾನಗರ ಪಾಲಿಕೆಯ ಅಭಿವೃದ್ಧಿ ಉಪ ಆಯುಕ್ತರು ಕೋರಿದ್ದಾರೆ.



ನಗರದ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಉದ್ದೇಶದಿಂದ ಪಾಲಿಕೆಯಿಂದ ನಗರದ ವಿವಿಧ ವಾರ್ಡಗಳ ಮುಖ್ಯ ರಸ್ತೆಗಳಲ್ಲಿ, ಉದ್ಯಾನವನಗಳಲ್ಲಿ, ಪ್ರಮುಖ ವೃತ್ತಗಳಲ್ಲಿ ಬೀದಿ ದೀಪಗಳ ಮಿಡಿಯನ್ ಕಬ್ಬಿಣದ ಕಂಬಗಳನ್ನು ಮತ್ತು ಹೈಮಾಸ್ಟಗಳನ್ನು ಅಳವಡಿಸಲಾಗಿದ್ದು, ನಗರದಲ್ಲಿ ಈಗಾಗಲೇ ಮಳೆಗಾಲ ಆರಂಭವಾಗಿರುವುದರಿಂದ ಮಿಡಿಯನ್ ದೀಪದ ಕಬ್ಬಿಣದ ಕಂಬಗಳಲ್ಲಿ, ಹೈಮಾಸ್ಟಳಲ್ಲಿ ಮತ್ತು ಬೀದಿ ದೀಪ ಅಳವಡಿಸಿರುವ ಆರ್.ಸಿ.ಸಿ./ ಕಬ್ಬಿಣದ ಕಂಬಗಳಲ್ಲಿ ಮತ್ತು ಬೀದಿ ದೀಪಗಳ ನಿಯಂತ್ರಣಕ್ಕಾಗಿ ಅಳವಡಿಸಿರುವ ಪ್ಯಾನೆಲ್ ಬೋರ್ಡ್ಗಳಿಗೆ ಅತಿಯಾದ ಮಳೆಯ ಕಾರಣದಿಂದ ಕರೆಂಟ್ ಸೋರಿಕೆ, ಅರ್ಥಿಂಗ್, ಇಂಡಕ್ಷನ್ ಆಗಿ ಕೆಲವು ಕಂಬಗಳ/ ಪ್ಯಾನೆಲ್ ಬೋರ್ಡ್/ಡ್ರಾಪ್ ಸುತ್ತಲೂ ಕರೆಂಟ್ ಪ್ರವಹಿಸಿ ಸಾರ್ವಜನಿಕರಿಗೆ, ಜಾನುವಾರುಗಳಿಗೆ ಶಾಕ್ ಹೊಡೆಯುವ ಸಾಧ್ಯತೆ ಇರುವ ಕಾರಣ ಅವುಗಳ ಹತ್ತಿರ ಹೋಗದಂತೆ, ಅವುಗಳನ್ನು ಮುಟ್ಟದಂತೆ ಹಾಗೂ ಜೆಸ್ಕಾಂನ ಆರ್.ಸಿ.ಸಿ./ ಇತರೆ ಕಂಬಗಳಿಗಿರುವ ಬೀದಿ ದೀಪಗಳ ಡ್ರಾಪ್ /ಹುಕ್/ ಕಟೌಟ್‌ಗಳನ್ನು ಸಾರ್ವಜನಿಕರು ಹಾಕದಂತೆ ಮುಂಜಾಗ್ರತೆ ಕ್ರಮಗಳನ್ನು ವಹಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಯ್ಯೋಧ್ಯೆ ಶ್ರೀರಾಮ ಮಂದಿರ ಮಾದರಿ ಪ್ರದರ್ಶನ



ಯುವ ಮಾರ್ಗ ಸುದ್ದಿ

**ಮಾನ್ವಿ:**ಪಟ್ಟಣದ ವಾಸವಿ ಕಲ್ಯಾಣ ಮಂಟಪದಲ್ಲಿ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ವತಿಯಿಂದ ಬಿದರೆ ಗ್ರಾಮದ ವಿನಯರಾಮ ರವರು ನಿರ್ಮಿಸಿರುವ ಅರಮನೆ ಶೈಲಿಯ ಅಯ್ಯೋಧ್ಯೆ ಶ್ರೀ ರಾಮ ಮಂದಿರ ಮಾದರಿ ಪ್ರದರ್ಶನಕ್ಕೆ ಮಾನ್ವಿ ಕಲ್ಮಠ ಶ್ರೀ ವಿರೂಪಾಕ್ಷಪಂಡಿತಾರಾಧ್ಯ ಶಿವಚಾರ್ಯ ಮಹಾಸ್ವಾಮಿಗಳು ಚಾಲನೆ ನೀಡಿ ಆರ್ಶಿವಾಚನ ನೀಡಿ ನಮ್ಮ ಸನಾತನ ಧರ್ಮದ ಬಗ್ಗೆ ಹಾಗೂ ಶ್ರೀರಾಮನ ಬಗ್ಗೆ ತಮ್ಮ ಜೀವನವನ್ನೇ ಬಿದರೆ ಗ್ರಾಮದ ವಿನಯರಾಮ ರವರು 101 ಪ್ರದರ್ಶನದ ಸಂಕಲ್ಪವನ್ನು ತೋಟ್ಟು ತಮ್ಮ ತನುಮನ ಧನವನ್ನು ಸಮರ್ಪಿಸಿಕೊಂಡು ನಾಡಿನಾದ್ಯಂತ ಸಂಚಾರಿಸಿ ಅಯ್ಯೋಧ್ಯೆ ಶ್ರೀರಾಮನ ಮಂದಿರದ ದರ್ಶನವನ್ನು ಮಾಡಿಸಿ ಪ್ರತಿಯೊಬ್ಬರಿಗೂ ಕೂಡ ಅಯ್ಯೋಧ್ಯೆಯಲ್ಲಿನ ಶ್ರೀ ರಾಮ ಮಂದಿರ ಹಾಗೂ ಬಾಲರಾಮನ ದರ್ಶನ ಮಾಡುವುದಕ್ಕೆ ಪ್ರೇರಣೆಯನ್ನು ನೀಡುತ್ತಿದ್ದಾರೆ ಎಂದು ತಿಳಿಸಿದರು.

ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವಮಹಾಸ್ವಾಮಿಗಳು ಹಾಗೂ ಅರಮನೆ ಶೈಲಿಯ ಅಯ್ಯೋಧ್ಯೆ ಶ್ರೀ ರಾಮ ಮಂದಿರ ಮಾದರಿಯ ರೂವಾರಿಗಳಾದ ಬಿದರೆ ಗ್ರಾಮದ ವಿನಯರಾಮ ರವರು ಮಾತನಾಡಿದರು.

ಶ್ರೀ ಕನ್ನಿಕಾ ಭಜನಾ ಮಂಡಳಿ ಹಾಗೂ ಶ್ರೀ ವಾಸವಾಂಬ ಭಜನಾ ಮಂಡಳಿ ,ವಾಸವಿ ಪುರುಷರ ಭಜನಾ ಮಂಡಳಿ ತಂಡದಿಂದ ಭಜನೆ ಹಾಗೂ ಭಕ್ತಿಗೀತೆಗಳ ಗಾಯನ ನಡೆಯಿತು. ನೂರಾರು ಭಕ್ತರು ಅಯ್ಯೋಧ್ಯೆ ಶ್ರೀ ರಾಮ ಮಂದಿರ ಮಾದರಿ ಪ್ರದರ್ಶನ ಹಾಗೂ ಬಾಲರಾಮನ ದರ್ಶನ ಮಾಡಿಕೊಂಡು ಶ್ರೀ ರಾಮಚಂದ್ರ ಪ್ರಭುವಿಗೆ ಪೂಜೆ ಸಲ್ಲಿಸಿದರು. ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ತಾ.ಅಧ್ಯಕ್ಷರಾದ ಆರ್.ಮುತ್ತುರಾಜ್ ಶೆಟ್ಟಿ ಹಾಗೂ ಕಾರ್ಯದರ್ಶಿ ಬಿ.ಈರಣ್ಣ ಸೇರಿದಂತೆ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದರು.

# ಐಎಸ್ಎಸ್ ತಲುಪಿದ ಶುಭಾಂಶು ಶುಕ್ಲಾ



**ನವದೆಹಲಿ,ಜೂ.26–**ಸುಮಾರು 28 ಗಂಟೆಗಳ ಪ್ರಯಾಣದ ನಂತರ, ಆಕ್ಸಿಯಮ್ –4 ಮಿಷನ್ ಹೊತ್ತ ಡ್ರ್ಯಾಗನ್ ಬಾಹ್ಯಾಕಾಶ ನೌಕೆ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣವನ್ನು ತಲುಪಿದೆ. ಬಾಹ್ಯಾಕಾಶ ನೌಕೆಯ ಡಾಕಿಂಗ್ ಯಶಸ್ವಿಯಾಗಿದೆ. ಆಕ್ಸಿಯಮ್ ಮಿಷನ್ ಅಡಿಯಲ್ಲಿ, ಗಗನಯಾತ್ರಿಗಳು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ 14 ದಿನಗಳನ್ನು ಕಳೆಯುಲಿದ್ದಾರೆ ಮತ್ತು ಈ ಸಮಯದಲ್ಲಿ 60 ಪ್ರಯೋಗಗಳನ್ನು ನಡೆಸುತ್ತಾರೆ.

ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರ ಸ್ಪೇಸ್‌ಎಕ್ಸ್ ಡ್ರ್ಯಾಗನ್ ಕ್ಯಾಪ್ಸುಲ್ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣವನ್ನು ತಲುಪಿದೆ. ಜೂನ್ 26 ರ ಗುರುವಾರ ಭಾರತೀಯ ಸಮಯ ಸುಮಾರು ಸಂಜೆ 4.30 ಕ್ಕೆ ಬಾಹ್ಯಾಕಾಶ ನೌಕೆ ಐಎಸ್‌ಎಸ್ ನೊಂದಿಗೆ ಸಂಪರ್ಕ ಸಾಧಿಸಿದೆ, ಸುಮಾರು 28.5 ಗಂಟೆಗಳ ಪ್ರಯಾಣದ ನಂತರ. ಡ್ರ್ಯಾಗನ್ ಕ್ಯಾಪ್ಸುಲ್ ಈ ಹಿಂದೆ ನಿಗದಿಪಡಿಸಿದ ಸಮಯಕ್ಕಿಂತ 20 ನಿಮಿಷಗಳ ಮೊದಲು ಡಾಕ್ ಆಗಿದೆ. ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ಮತ್ತು ಡ್ರ್ಯಾಗನ್ ಬಾಹ್ಯಾಕಾಶ ನೌಕೆಯ ನಡುವಿನ ಡಾಕಿಂಗ್ ಪ್ರಕ್ರಿಯೆಯು ಪೂರ್ಣಗೊಳ್ಳಲು ಒಂದು ಗಂಟೆಗಿಂತ ಹೆಚ್ಚು ಸಮಯ ತೆಗೆದುಕೊಳ್ಳುತ್ತದೆ. ಇದರಲ್ಲಿ ಗಾಳಿಯ ಸೋರಿಕೆ ಮತ್ತು ಒತ್ತಡದ ಸ್ಥಿರತೆಯನ್ನು ದೃಢೀಕರಿಸಲಾಗುತ್ತದೆ. ಇದರ ನಂತರ ಸಿಬ್ಬಂದಿ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣವನ್ನು ಪ್ರವೇಶಿಸುತ್ತಾರೆ.

ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ (ಐಎಸ್‌ಎಸ್) ಯಶಸ್ವಿಯಾಗಿ ಹಾರುವ ಮೂಲಕ ಹೊಸ ಇತಿಹಾಸವನ್ನು ಸೃಷ್ಟಿಸಿದ್ದಾರೆ. ಇತರ ಮೂವರು ಗಗನಯಾತ್ರಿಗಳೊಂದಿಗೆ ಹೊರಟ ಶುಭಾಂಶು, ಈ ಪ್ರಯಾಣವನ್ನು 41 ವರ್ಷಗಳ ನಂತರ ಭಾರತೀಯನೊಬ್ಬನ ಮೊದಲ ಬಾಹ್ಯಾಕಾಶ ಪ್ರಯಾಣವನ್ನಾಗಿ ಮಾಡಿದ್ದಾರೆ .ಅವರು ಐಎಸ್‌ಎಸ್ ಗೆ ಪ್ರಯಾಣಿಸಿದ ಮೊದಲ ಭಾರತೀಯ ಗಗನಯಾತ್ರಿ.

1984 ರಲ್ಲಿ ವಿಂಗ್ ಕಮಾಂಡರ್ ಖಗೋಳ ವಿಜ್ಞಾನಿ ರಾಕೇಶ್ ಶರ್ಮಾ ಇತಿಹಾಸ ನಿರ್ಮಿಸಿದ ನಾಲ್ಕು ದಶಕಗಳ ನಂತರ, ಮಿಷನ್ ಪೈಲಟ್ ಆಗಿರುವ ಶುಕ್ಲಾ, ಬಾಹ್ಯಾಕಾಶಕ್ಕೆ ಹೋಗುತ್ತಿರುವ ಭಾರತದ ಎರಡನೇ ಗಗನಯಾತ್ರಿ. 39 ವರ್ಷದ ಶುಭಾಂಶು ಶುಕ್ಲಾ. ಭಾರತೀಯ ವಾಯುಸೇನೆಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರು ಈ ಮಿಷನ್‌ನ ಪೈಲಟ್ ಆಗಿ ಈ ಐತಿಹಾಸಿಕ ಹಾರಾಟಕ್ಕೆ ಇಸ್ರೋ ಮಿಷನ್ ಪೈಲಟ್ ಆಗಿ ಆಯ್ಕೆ ಮಾಡಿದೆ.ಬುಧವಾರ ಮಧ್ಯಾಹ್ನ 12:01 ಕ್ಕೆ ಫ್ಲೋರಿಡಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಸ್ಪೇಸ್‌ಎಕ್ಸ್‌ನ ಫಾಲ್ಕನ್ –9 ರಾಕೆಟ್ ಯಶಸ್ವಿಯಾಗಿ ಐಎಸ್‌ಎಸ್‌ಗೆ ಹಾರಿದೆ. ಆಕ್ಸಿಯಮ್ –4 ಕಾರ್ಯಾಚರಣೆಯ ಗಗನಯಾತ್ರಿಗಳನ್ನು ಹೊತ್ತೊಯ್ಯುದಿದೆ. ಡ್ರ್ಯಾಗನ್ ಕ್ಯಾಪ್ಸುಲ್ ಯಶಸ್ವಿಯಾಗಿ ಡಾಕ್ ಮಾಡಿದ್ದಕ್ಕಾಗಿ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಸ್ಪೇಸ್‌ಎಕ್ಸ್‌ಗೆ ಅಭಿನಂದನೆ ಸಲ್ಲಿಸಿದ್ದಾರೆ. ಅವರು ಟ್ವೀಟ್ ಮಾಡಿದ್ದಾರೆ, ಅಭಿನಂದನೆಗಳು ಆಕ್ಸಿಯಮ್ –4 ಡಾಕಿಂಗ್ ಯಶಸ್ವಿಯಾಗಿದೆ. ಶುಭಾಂಶು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದ ದ್ವಾರದಲ್ಲಿ ನಿಂತಿದ್ದಾರೆ. ಒಳಗೆ ಹೆಜ್ಜೆ ಹಾಕಲು ಸಿದ್ಧವಾಗಿದೆ, 14 ದಿನಗಳ ಬಾಹ್ಯಾಕಾಶ ಪ್ರಯಾಣ ಪ್ರಾರಂಭವಾಗಲಿದೆ ಮತ್ತು ಇಡೀ ಜಗತ್ತು ಉತ್ಸಾಹ ಮತ್ತು ನಿರೀಕ್ಷೆಯಿಂದ ನೋಡುತ್ತಿದೆ ಎಂದಿದ್ದಾರೆ.

# ಮೂವರ ಹತ್ಯೆ ಪ್ರಕರಣ: 7 ಮಂದಿ ಆರೋಪಿಗಳ ಬಂಧನ

**ಕಲಬುರಗಿ:ಜೂ.25–** ನಗರದ ಹೊರವಲಯದ ಪಟ್ಟಣ ಗ್ರಾಮದ ಸಮೀಪದ ಡೈವರ್ ಧಾಬಾ ಬಳಿ ಮಾರಕಾಸ್ತ್ರಗಳಿಂದ ಕೊಚ್ಚಿ ಮೂವರನ್ನು ಹತ್ಯೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ 7 ಮಂದಿ ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ತಿಳಿಸಿದ್ದಾರೆ.

ಹತ್ಯೆಗೆ ಸಂಬಂಧಿಸಿದಂತೆ 11 ಮಂದಿ ವಿರುದ್ಧ ದೂರು ದಾಖಲಾಗಿದ್ದು, 7 ಮಂದಿಯನ್ನು ವಶಕ್ಕೆ ಪಡೆದು, ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸ್ ಕಮಿಷನರ್ ತಿಳಿಸಿದ್ದಾರೆ.

ಮಂಗಳವಾರ ತಡರಾತ್ರಿ 1.30 ರ ಸುಮಾರಿಗೆ ಡೈವರ್ ಧಾಬಾಗೆ ನುಗ್ಗಿದ ದುಷ್ಕರ್ಮಿಗಳು ಮಾರಾಕಾಸ್ತ್ರಗಳಿಂದ ಕೊಚ್ಚಿ ಮೂವರನ್ನು ಹತ್ಯೆ ಮಾಡಿದ್ದರು. ಹಳೆಯ ದ್ವೇಷದ ಕಾರಣ ದುಷ್ಕರ್ಮಿಗಳು ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿತ್ತು.ಈ ಕುರಿತು ಕಲಬುರಗಿ ಸರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜೂ.26–**ಇಲ್ಲಿನ ತಾಲೂಕು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗಾಗಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಶುಲ್ಕ ಮರುಪಾವತಿಗಾಗಿ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿ ವೇತನಕ್ಕಾಗಿ ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ ಮೂಲಕ http:// ssp.karnataka.gov.in ಸೆಪ್ಟಂಬರ್ 30ರೊಳಗಾಗಿ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮಾಹಿತಿ ಕೇಂದ್ರ ರಾಯಚೂರು ಮೊಬೈಲ್ ಸಂಖ್ಯೆ: 9731028420, ದೇವದುರ್ಗ 9148233616ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಉಪ ವಿಭಾಗದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲ್ಲೂಕು ವಿಸ್ತರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 28, 29ರಂದು ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

**ರಾಯಚೂರು,ಜೂ.26–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ–1 ಹಾಗೂ 2ರ ವ್ಯಾಪ್ತಿಗೆ ಬರುವ 220 ಕೆ.ವಿ ಮಾರ್ಗದ ಮೊದಲನೇ ತ್ರೈಮಾಸಿಕ ನಿರ್ವಹಣೆ ಪ್ರಯುಕ್ತ ಜೂನ್ 28 ಹಾಗೂ 29ರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಜೂನ್ 28ರ ಬೆಳಿಗ್ಗೆ ಸಿಇಒ ಆಫೀಸ್, ಶ್ರೀರಾಮ ನಗರ, ಉದಯನಗರ, ಆಜಾದ್ ನಗರ, ಸ್ಟೇಶನ್ ಏರಿಯಾ, ಇಂದಿರಾ ನಗರ, ಅಶೋಕ್ ಡಿಪೋ, ಗೋಲ್ ಮಾರ್ಕೆಟ್, ಚಾರಾ ಬಜಾರ್, ಮಚ್ಚಿ ಬಜಾರ್, ಕಮೇಲಾ, ಸಿಟಿ ಟಾಕೀಸ್ ರೋಡ್, ಎಸ್. ಎನ್.ಟಿ ಟಾಕೀಸ್, ಗಾಂಧಿ ಚೌಕ್, ಮಹಾವೀರ್ ಚೌಕ್, ಮಹಾಳೇಶ್ವರ ವೃತ್ತ, ಕುಂಬಾರ್ ಓಣಿ, ಮಕ್ತಲ ಪೇಟೆ, ಮದ್ದಿಪೇಟೆ, ವಡ್ಡೆಪ್ಪ ಜಿನಾನಿ ಸುರಕ್ಷ ಆಸ್ಪತ್ರೆ, ಗೋಶಾಲೆ ರಸ್ತೆ, ಮೊಹಲ್ಲಾ ಸಿಯಾತಲಾಬ, ಆಟೋ ನಗರ, ಶಿವಂ ಆಸ್ಪತ್ರೆ, ಜಿಲ್ಲಾ ಅಗ್ನಿ ಶಾಮಕ ಕಚೇರಿ, ಜಿಲ್ಲಾ ಪಂಚಾಯತಿ, ಗಂಜ್ ರಸ್ತೆ ಯಿಂದ ಬಸವನ ಬಾವಿ, ಜಿಲ್ಲಾ ಅರಣ್ಯ ಕಚೇರಿ, ರೈಲ್ವೆ ಸ್ಟೇಷನ್, ಆಫೋರ್ಸ್ ಕಾಲೋನಿ, ಆಶಾಪುರ ರಸ್ತೆ, ಗುಡ್ ಶೆಡ್ ರಸ್ತೆ, ಐಬಿ ಕಾಲೋನಿ, ಜ್ಯೋತಿ ಕಾಲೋನಿ, ಐ.ಡಿಎಸ್.ಎಮ್.ಟಿ ಲೇಔಟ್, ಟಿವಿ ಸ್ಟೇಷನ್, ಪವನ್ ಲೇಔಟ್, ಗ್ಯಾನ್ ಮಂದಿರ, ಆಫಿರ್ಸ್ ಕಾಲೋನಿ, ಕೇಂದ್ರಿಯ ವಿದ್ಯಾಲಯ, ದೇವರು ಕಾಲೋನಿ, ಮೆಥಡಿಸ್ಟ್ ಚರ್ಚ್, ಕುಲುಸುಂಬಿ ಕಾಲೋನಿ, ಜಂಡಕಟ್ಟ, ನವರಂಗ ದರ್ವಾಜ, ಟಿಪ್ಪು ಸುಲ್ತಾನ್ ರೋಡ್, ಡಿ.ಸಿ. ಆಫೀಸ್ ಮುಂದುಗಡೆ, ಹಾಜಿ ಕಾಲೋನಿ, ಕೋಟ್ ತಲಾರ್, ಹೊಸ ಸಿಎಮ್‌ಸಿ ಕಚೇರಿ, ಡ್ಯಾಡಿ ಕಾಲೋನಿ, ಸರ್ಕಾರಿ ಪದವಿ ಕಾಲೇಜು, ಪಿ.ಸಿ.ಬಿ ಕಾಲೋನಿ, ಡುಂಬಾ ಕಾಲೋನಿ, ಸಿಟಿ ಕ್ಲಬ್, ಅಲ್ಲಿ ನಾಯಕ್ ಕಾಲೋನಿ, ಗುರು ಬಸವ ಕಾಲೋನಿ, ಕಾಕತೀಯ ಕಾಲೋನಿ, ಶಾಂತಿ ಕಾಲೋನಿ, ಡಾರ್ಸ ಕಾಲೋನಿ, ರಾಯಚೂರು ಒಳ ಚರಂಡಿ ನೀರು ಮತ್ತು ಸಂಬಂಧಿಸಿದ ಪ್ರದೇಶ, ಬಸವೇಶ್ವರ ಕಾಲೋನಿ, ಬಂದೇ ನವಾಜ್ ಕಾಲೋನಿ, ಭಾರತಿ ನಗರ, ಚೆಕ್ಪೋಸ್ಟ್, ಎನ್‌ಜಿಒ ಕಾಲೋನಿ, ಗೌಸಿಯಾ ಕಾಲೋನಿ, ಎಸ್.ಟಿ ನಿಜಾಮುದ್ದೀನ್ ಕಾಲೋನಿ, ದೇವರಾಜ್ ಅರಸ್ ಕಾಲೋನಿ. ಗಾಂಧಿ ಲೇಔಟ್, ಅಶೋಕ್ ಕುಮಾರ್ ಲೇಔಟ್, ಲಿಂಗಸಗೂರು ರಸ್ತೆ, ಕೃಷಿ ವಿಶ್ವವಿದ್ಯಾಲಯ ಎದುರುಗಡೆ ಪ್ರದೇಶಗಳಲ್ಲಿ ಹಾಗೂ ಜೂನ್ 29ರ ಬೆಳಗ್ಗೆಯಿಂದ ಕೆಇಬಿ ಕಾಲೋನಿ, ಎಮ್.ಜಿ ಸ್ಟೇಡಿಯಂ, ಜೆಸ್ಕಾಂ ಆಫೀಸ್, ಗಾಲಿಬ್ ನಗರ, ಬಸ್ ನಿಲ್ದಾಣ, ತಹಶೀಲ್ದಾರ್ ಆಫೀಸ್, ಜ್ಯೂನೀಯರ್ ಕಾಲೇಜ್, ಹೆಡ್ ಪೋಸ್ಟ್ ಆಫೀಸ್, ಆಂದ್ರೂನ್ ಕಿಲ್ಲಾ, ಬೇರೂನ್ ಕಿಲ್ಲಾ, ಜೈಲ್ ಖಾನಾ, ಬೂಬ್ ಭವನ, ಜೈನ್ ಮಂದಿರ, ಕಿಲ್ಲಾರಿ ಮಠ, ಜಿಲ್ಲಾ ಆರೋಗ್ಯ ಕಚೇರಿ, ತೀನ್ ಕಂದೀಲ್ ನೋಬಲ್ ಆಫೀಸ್, ಹಮರ್ದ ಸ್ಕೂಲ್, ಶಿಫಾ ಮೆಡಿಕಲ್, ಸೂಪರ್ ಮಾರ್ಕೆಟ್, ಪೆಟ್ಲಾ ಬರ್ಜ್, ಗಣೇಶ ಕಟ್ಟಾ, ದಾದಾ ಫಂಕ್ಷನ್ ಹಾಲ್, ಕೋಟೆ, ಗಂಗಾನಿವಾಸ, ಕಾಸಬಾವಿ, ನಿಜಲಿಂಗಪ್ಪ ಕಾಲೋನಿ, ಹೊಸೂರು, ಎಕ್ಲಾಸ್ಪುರ ರಸ್ತೆ, ಗೌಸಿಯಾ ಕಾಲೋನಿ, ಬಂದೇನವಾಜ ಕಾಲೋನಿ, ವೆಂಕಟೇಶ್ವರ ಕಾಲೋನಿ, ಕುಲುಸುಂಬಿ ಕಾಲೋನಿ, ಅಗ್ರಕಲ್ಚರ್ ಯುನಿವರ್ ಸಿಟಿ, ಅಸಕಿಹಾಳ್, ಎಕ್ಲಾಸ್ ಪುರ. ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226386, 08532–231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗ–1 ಹಾಗೂ 2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲಾವಿದ ರೆಹಮಾನ್ ಪಟೇಲ್ ಅವರಿಗೆ ಸನ್ಮಾನ

**ಕಲಬುರಗಿ,ಜೂ.26–**ಖ್ಯಾತ ಕಲಾವಿದ ಮತ್ತು ಸಂಶೋಧಕ ಮಲ್ಲಿಕಾರ್ಜುನ ಬಾಗೋಡಿ ಅವರನ್ನು ಇಂದು ಅವರ ನಿವಾಸದಲ್ಲಿ ಕರ್ನಾಟಕ ಲಲಿತಕಲಾ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ರೆಹಮಾನ್ ಪಟೇಲ್ ಅವರಿಗೆ ಸನ್ಮಾನಿಸಲಾಯಿತು.

ಬಾಗೋಡಿ ಅವರು ತಮ್ಮ "ಚಿತ್ರ ಭಿತ್ತಿ" (ಕಲ್ಯಾಣ ಕರ್ನಾಟಕ ಪ್ರದೇಶದ ಗೋಡೆ ಭಿತ್ತಿಚಿತ್ರಗಳ ವಿಶೇಷ ಉಲ್ಲೇಖ) ಎಂಬ ಪುಸ್ತಕವನ್ನು ಪಟೇಲ್ ಅವರಿಗೆ ಸ್ಮರಣಾರ್ಥವಾಗಿ ಪ್ರದಾನ ಮಾಡಿದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**